# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 159 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 06–01–2024 ಶನಿವಾರ | ಪುಟ: 4 | ಬೆಲೆ : ರೂ.2–00

Volume - 01 Issue - 159 | Title- Code: KARKAN 28269 | Chitradurga | Date: 06-01-2024 Saturday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ಜಿಲ್ಲೆಯ ಕಾಲೇಜುಗಳಲ್ಲಿ ಯುವನಿಧಿ ನೊಂದಣಿಗೆ ವಿಶೇಷ ಅಭಿಯಾನ: ದಿವ್ಯಪ್ರಭು 2

ಚಿತ್ರದುರ್ಗದಲ್ಲಿ ನಡೆಯುವ ಕಾರ್ಯಕ್ರಮಕ್ಕೆ ಸಮಾಜ ಬಾಂಧವರು ಭಾಗಿಯಾಗಲು ಕರೆ 3

ಉಪ್ಪಾರಹಟ್ಟಿಯಲ್ಲಿ ರುದ್ರಭೂಮಿ ಸಮಸ್ಯೆ ಪೊಲೀಸ್ ಭದ್ರತೆಯಲ್ಲಿ ಅಂತ್ಯಸಂಸ್ಕಾರ 4



ಸುದ್ದಿ, ಜಾಹಿರಾತಿಗೆ 9686622252


## ಶುಭ ನುಡಿ

ಬದುಕು ಎಂಬುದೊಂದು ತುತ್ತೂರಿ ಇದ್ದಂತೆ. ನೀವು ಅದರೊಳಗೆ ಗಾಳಿ ಹಾಕದಿದ್ದರೆ, ಅದರಿಂದ ಸ್ವರ ಬರಲು ಸಾಧ್ಯವಿಲ್ಲ. ಅಂತೆಯೇ ಜೀವನದಲ್ಲಿ ಪರಿಶ್ರಮ ಪಟ್ಟರಷ್ಟೇ ಪ್ರತಿಫಲ ದೊರೆಯುತ್ತದೆ.

» ಶುಭೋದಯ

# ದೇವಸ್ಥಾನ ಅಭಿವೃದ್ಧಿಗೆ ಸರ್ಕಾರದ ಅನುದಾನ ಜೊತೆ ಸ್ಥಳೀಯರ ಸಹಕಾರ ಅಗತ್ಯ: ರಘುಮೂರ್ತಿ

» ನಮ್ಮಜನ ವಾರ್ತೆ ಚಿತ್ರದುರ್ಗ

ದೇವಸ್ಥಾನಗಳ ಅಭಿವೃದ್ಧಿ ಮಾಡಲು ಸರ್ಕಾರದ ಅನುದಾನ ಜೊತೆಗೆ ಸ್ಥಳೀಯ ಭಕ್ತರು ದಾನ ಮಾಡಿದರೆ ಉತ್ತಮ ದೇವಸ್ಥಾನ ನಿರ್ಮಾಣವಾಗುತ್ತದೆ. ಇಂತಹ ಕೆಲಸವನ್ನು ಭೀಮರೆಡ್ಡಿ ಪಾಪಮ್ಮ ಮಾಡುವ ಮೂಲಕ ಎಲ್ಲಾರಿಗೂ ಮಾದರಿಯಾಗಿದ್ದಾರೆ ಎಂದು ಶಾಸಕ ಟಿ.ರಘುಮೂರ್ತಿ ಅವರು ಹೇಳಿದರು.

ಇಂದು ತಾಲ್ಲೂಕಿನ ತುರುವನೂರು ಹೋಬಳಿಯ ಬೆಳಘಟ್ಟ ಗ್ರಾಮದಲ್ಲಿ ನಡೆದ ಶ್ರೀ ದುರ್ಗಾದೇವಿ ದೇವಸ್ಥಾನದ ಕಳಸಾರೋಹಣ ಮತ್ತು ದೇವಸ್ಥಾನ ಉದ್ಘಾಟನೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಪ್ರತಿ ಗ್ರಾಮದಲ್ಲಿ ದೇವಸ್ಥಾನಗಳ ನಿರ್ಮಾಣದಿಂದ ಶಾಂತಿ ನೆಲೆಸುತ್ತದೆ. ದೇವಸ್ಥಾನಗಳ ಅಭಿವೃದ್ಧಿ ಮಾಡಲು ನಾವು ಶಾಸಕರ ಅನುದಾನ ಮತ್ತು ಮುಜರಾಯಿ ಇಲಾಖೆ ಅನುದಾನ ನೀಡುತ್ತೇನೆ. ಆದರೆ ಸಂಪೂರ್ಣ ಅಭಿವೃದ್ಧಿ ಮಾಡಲು



ಸ್ಥಳೀಯ ಗ್ರಾಮಸ್ಥರು ಮತ್ತು ಭಕ್ತರು ಕೈ ಜೋಡಿಸಬೇಕು. ಹಣ ಇದ್ದವರೆಲ್ಲ ದಾನ ಮಾಡಲು ಸಾಧ್ಯವಿಲ್ಲ. ಸಮಾಜದ ಬಗ್ಗೆ ಕಾಳಜಿ ಮತ್ತು ದಾನ ಮಾಡುವ ಮನಸ್ಸಿರಬೇಕು ಅಂತಹ ದಾನ ಮಾಡುವ ಗುಣವನ್ನು ಬೆಳಘಟ್ಟ ಗ್ರಾಮದ

ಭೀಮರೆಡ್ಡಿ ಮತ್ತು ಪತ್ನಿ ಪಾಪಮ್ಮ ಅಳವಡಿಸಿಕೊಳ್ಳುವ ಮೂಲಕ ದೇವಸ್ಥಾನ ಅಭಿವೃದ್ಧಿಗೆ 42 ಲಕ್ಷ ಹಣವನ್ನು ನೀಡಿದ್ದು ನಾವೆಲ್ಲರೂ ಅವರಿಗೆ ದುರ್ಗಾದೇವಿ ಉತ್ತಮ ಆರೋಗ್ಯ, ಆಯಸ್ಸು ನೀಡಲಿ ಎಂದು ಪ್ರಾರ್ಥಿಸೋಣ ಎಂದರು.

ನಾನು ಸಹ ಮುಜರಾಯಿ ಇಲಾಖೆಯಿಂದ 10 ಲಕ್ಷ ಅನುದಾನ ದುರ್ಗಾದೇವಿ ದೇವಸ್ಥಾನ ನಿರ್ಮಾಣಕ್ಕೆ ನೀಡಿದ್ದೇನೆ. ಆದರೆ ಅದು ಪೂರ್ಣಗೊಳ್ಳಲು ಭೀಮರೆಡ್ಡಿ ಅವರ ಸಹಕಾರದಿಂದ ಸಾಧ್ಯವಾಯಿತು. ಎಲ್ಲಾರಿಗೂ ಇಂತಹ ಗುಣ ಬೆಳೆಸಿಕೊಂಡರೆ ಉತ್ತಮ ವಾತವರಣ ನಿರ್ಮಾಣವಾಗುತ್ತದೆ ಜೊತೆ ಗ್ರಾಮಗಳಲ್ಲಿ ಸಹಬಾಳ್ವೆ ಬದುಕು ನಡೆಸಲು ಅನುಕೂಲವಾಗುತ್ತದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಅಧ್ಯಕ್ಷ ಮಂಜು ಶ್ರೀ, ಉಪಾಧ್ಯಕ್ಷ ರಾಮಚಂದ್ರ ರೆಡ್ಡಿ, ಮಾಜಿ ಜಿ.ಪ.ಸದಸ್ಯ ಬಾಬುರೆಡ್ಡಿ, ದಾನಿಗಳಾದ ಭೀಮರೆಡ್ಡಿ, ಪಾಪಮ್ಮ, ಗ್ರಾಮ ಪಂಚಾಯತಿ ಸದಸ್ಯ ಹನುಮಂತರೆಡ್ಡಿ ಮತ್ತು ಸ್ಥಳೀಯ ಮುಖಂಡರು ಇದ್ದರು.

## ಫಾಸ್ಟ್ ನ್ಯೂಸ್

### ಇಂದು ಜಿಲ್ಲಾ ಮಟ್ಟದ ಜನತಾದರ್ಶನ ಸಭೆ: ಉಸ್ತುವಾರಿ ಸಚಿವ ಡಿ.ಸುಧಾಕರ್ ಚಾಲನೆ

» ಚಳ್ಳಕೆರೆ

ಜಿಲ್ಲಾ ಮಟ್ಟದ ಜನತಾದರ್ಶನ ಕಾರ್ಯಕ್ರಮವನ್ನು ನಗರದ ಶ್ರೀಗುರುರಾಘವೇಂದ್ರ ಕಲ್ಯಾಣ ಮಂಟಪದಲ್ಲಿ ಬೆಳಗ್ಗೆ 10.30ಕ್ಕೆ ಹಮ್ಮಿಕೊಂಡಿದ್ದು ಜಿಲ್ಲಾ ಉಸ್ತವಾರಿ ಸಚಿವ ಡಿ.ಸುಧಾಕರ್ ಕಾರ್ಯಕ್ರಮವನ್ನು ಉದ್ಘಾಟಿಸುವರು ಎಂದು ಜಿಲ್ಲಾಧಿಕಾರಿಗಳ ಕಾರ್ಯಾಲಯ ಸೂಚನೆ ನೀಡಿದೆ. ಕ್ಷೇತ್ರದ ಶಾಸಕ ಟಿ.ರಘುಮೂರ್ತಿ, ಹೊಸದುರ್ಗ ಶಾಸಕ ಬಿ.ಜಿ.ಗೋವಿಂದಪ್ಪ, ಮೊಳಕಾಲ್ಮೂರು ಶಾಸಕ ಎನ್.ವೈ.ಗೋಪಾಲಕೃಷ್ಣ, ಚಿತ್ರದುರ್ಗ ಶಾಸಕ ಕೆ.ಸಿ.ವೀರೇಂದ್ರಪಪ್ಪಿ, ಹೊಳಲ್ಕೆರೆ ಶಾಸಕ ಎಂ.ಚಂದ್ರಪ್ಪ, ಜಿಲ್ಲಾಧಿಕಾರಿ ದಿವ್ಯಪ್ರಭು ಕಾರ್ಯಕ್ರಮದಲ್ಲಿ ಉಪಸ್ಥಿತರಿರುವರು. ಜಿಲ್ಲಾ ಮಟ್ಟದ ಜನತಾ ದರ್ಶನಸಭೆಯಲ್ಲಿ ಜಿಲ್ಲಾ ಮಟ್ಟದ ಎಲ್ಲಾ ಅಧಿಕಾರಿಗಳು ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದು, ಸಾರ್ವಜನಿಕರ ಸಮಸ್ಯೆ, ಅವುಗಳ ಪರಿಹಾರ ಕುರಿತು ಮಾರ್ಗದರ್ಶನ ನೀಡುವರು. ಈ ಸಭೆಯಲ್ಲಿ ಹೆಚ್ಚಿನ ಸಂಖ್ಯೆಯ ಸಾರ್ವಜನಿಕರು ಭಾಗವಹಿಸಿ ಯಶಸ್ವಿಗೊಳಿಸಲು ತಾಲ್ಲೂಕು ಆಡಳಿತ ಮನವಿ ಮಾಡಿದೆ.

### ಹಳೇ ವೈಷಮ್ಯದ ಹಿನ್ನೆಲೆ ಊರ ಹಬ್ಬದಲ್ಲಿ ಚಾಕು ಇರಿದು ಯುವಕನ ಕೊಲೆ

» ಹೊಸದುರ್ಗ

ಹಳೇ ವೈಷಮ್ಯಕ್ಕೆ ಸಂಬಂಧಿಸಿದಂತೆ ಊರ ಹಬ್ಬ ನಡೆಯುತ್ತಿರುವ ಸಂಧರ್ಬದಲ್ಲೆ ಯುವಕನೊಬ್ಬನಿಗೆ ಚಾಕುವಿನಿಂದ ಇರಿದು ಕೊಲೆ ಮಾಡಿರುವ ಘಟನೆ ಶ್ರೀರಾಂಫುರ ಹೋಬಳಿ ' ನಾಗನಾಯಕನಕಟ್ಟೆ ಗ್ರಾಮದಲ್ಲಿ ಗುರುವಾರ ತಡರಾತ್ರಿ ಘಟನೆ ನಡೆದಿದೆ.ಕೊಲೆಯಾದ ಯುವಕನನ್ನ ಗ್ರಾಮದ ಮನೋಜ್(21) ಎಂದು ತಿಳಿದು ಬಂದಿದ್ದು ಗ್ರಾಮದಲ್ಲಿ ಹಬ್ಬ ನಡೆಯುತ್ತಿದ್ದಾಗಲೇ ಮನೋಜ್ ಹಾಗೂ ರಘು ಮತ್ತಿತರರ ನಡುವೆ ಗಲಾಟೆ ನಡೆದಿದ್ದು, ಇವರ ಗಲಾಟೆ ತಾರಕಕ್ಕೇರಿ ರಘು ಎಂಬುವವನು ಮನೋಜ್‌ಗೆ ಚಾಕುವಿನಿಂದ ಇರಿದಿದ್ದಾನೆ. ತಕ್ಷಣ ಮನೋಜ್‌ನನ್ನು ಆಸ್ಪತ್ರೆಗೆ ದಾಖಲಿಸಿದರೂ, ಚಿಕಿತ್ಸೆ ಫಲಕಾರಿಯಾಗದೇ ಮೃತಪಟ್ಟಿದ್ದು ಹಿರಿಯೂರು ತಾಲೂಕಿನ ಸೋಮೆನಹಳ್ಳಿ ತಾಂಡಾದ ರಘು ಹಾಗೂ ಮನೋಜ್ ನಡುವೆ ಹಳೆಯ ವೈಷಮ್ಯ ಇತ್ತು ಎನ್ನಲಾಗಿದ್ದು ಇಬ್ಬರ ನಡುವಿನ ಜಗಳ ಕೊಲೆಯಲ್ಲಿ ಅಂತ್ಯವಾಗಿದೆ. ಸ್ಥಳಕ್ಕೆ ಶ್ರೀರಾಂಪುರ ಪೊಲೀಸ್ ಠಾಣೆ ಸಿಪಿಐ ಮಧು ಭೇಟಿ ನೀಡಿ ಪರಿಶೀಲನೆ ನಡೆಸಿದ್ದು ಈ ಬಗ್ಗೆ ಶ್ರೀರಾಂಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

### ಇಂದು ಆಯ-ವ್ಯಯ ಸಭೆ

» ಹೊಸದುರ್ಗ

ಪಟ್ಟಣದ ಪುರಸಭೆಯ 2024–25 ನೇ ಸಾಲಿನ ಆಯ–ವ್ಯಯವನ್ನು ಸಿದ್ದಪಡಿಸುವ ಸಲುವಾಗಿ ಜ.6 ರಂದು ಶನಿವಾರ ಬೆಳಿಗ್ಗೆ 11 ಗಂಟೆಗೆ ಪಟ್ಟಣದ ಪುರಸಭೆಯ ಸಭಾಂಗಣದಲ್ಲಿ ಪುರಸಭಾ ಆಡಳಿತಾಧಿಕಾರಿ ಹಾಗು ಚಿತ್ರದುರ್ಗ ಉಪ ವಿಭಾಗಾಧಿಕಾರಿ ಕಾರ್ತಿಕ್ ಎಂ, ಇವರ ಅಧ್ಯಕ್ಷತೆಯಲ್ಲಿ ಸಾರ್ವಜನಿಕ ಪೂರ್ವಬಾವಿ ಸಭೆಯನ್ನ ಕರೆಯಲಾಗಿದೆ ಎಂದು ಪುರಸಭಾ ಮುಖ್ಯಾಧಿಕಾರಿ ತಿಮ್ಮರಾಜು ಜಿ.ವಿ. ತಿಳಿಸಿದ್ದಾರೆ. ಈ ಒಂದು ಮಹತ್ವದ ಸಭೆಗೆ ಗಣ್ಯ ವ್ಯಕ್ತಿಗಳು,ಸಂಘ ಸಂಸ್ಥೆಗಳ ಪದಾಧಿಕಾರಿಗಳು,ಸಾರ್ವಜನಿಕರು ಭಾಗವಹಿಸಿ ತಮ್ಮ ಸಲಹೆ ಹಾಗೂ ಸೂಚನೆಗಳನ್ನ ನೀಡುವುದರ ಮೂಲಕ ಪಟ್ಟಣದ ಎಲ್ಲಾ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ತಮ್ಮ ಸೂಕ್ತ ಸಲಹೆ ಸೂಚನೆಗಳನ್ನು ನೀಡಿ ಹೊಸದುರ್ಗ ಪಟ್ಟಣದ ಸಮಗ್ರ ಅಭಿವೃದ್ದಿಗೆ ಸಹಕರಿಸಬೇಕೆಂದು ಅಕೌಂಟೆಂಟ್ ಸಂತೋಷ್‌ಕುಮಾರ್ ಮನವಿ ಮಾಡಿದ್ದಾರೆ.

# ಇಂದಿರಾ ಕ್ಯಾಂಟೀನ್ ಮತ್ತು ಮಧ್ಯಾಹ್ನದ ಶಾಲಾ ಊಟದಲ್ಲಿ ಸಿರಿಧಾನ್ಯ ಬಳಕೆ: ಸಿಎಂ

» ಬೆಂಗಳೂರು

ಇಂದಿರಾ ಕ್ಯಾಂಟೀನ್ ಮತ್ತು ಮಧ್ಯಾಹ್ನದ ಶಾಲಾ ಊಟದಲ್ಲಿ ಸಿರಿಧಾನ್ಯ ಬಳಕೆ ಮಾಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಹತ್ವದ ಘೋಷಣೆ ಮಾಡಿದರು.

ಕೃಷಿ ಇಲಾಖೆ ಅರಮನೆ ಮೈದಾನದಲ್ಲಿ ಆಯೋಜಿಸಿದ್ದ ಸಿರಿಧಾನ್ಯ ಮತ್ತು ಸಾವಯವ ಅಂತಾರಾಷ್ಟ್ರೀಯ ವಾಣಿಜ್ಯ ಮೇಳ 2024 ಮತ್ತು ಸಿರಿಧಾನ್ಯ ತಿನಿಸುಗಳ ಪ್ರದರ್ಶನ ಮತ್ತು ಮಾರಾಟ ಮಳಿಗೆಗಳನ್ನು ಉದ್ಘಾಟಿಸಿ ಮಾತನಾಡಿದರು.

ನಮ್ಮ ರಾಜ್ಯದ ಜನರು ಮತ್ತು ಶಾಲಾ ಮಕ್ಕಳು ಇನ್ನಷ್ಟು ಸದೃಡವಾಗಿ , ಆರೋಗ್ಯವಂತರಾಗಲು ಇಂದಿರಾ ಕ್ಯಾಂಟೀನ್ ಮತ್ತು ಶಾಲಾ ಊಟದಲ್ಲಿ ಸಿರಿ ಧಾನ್ಯ ಬಳಸುವ ಸಂಬಂಧ ಸದ್ಯದಲ್ಲೇ ಸಂಬಂಧಪಟ್ಟ ಇಲಾಖೆಗಳ ಸಭೆ ಕರೆದು ಚರ್ಚಿಸಿ ತೀರ್ಮಾನಿಸಲಾಗುವುದು ಎಂದು ಘೋಷಿಸಿದರು.ಹಾಗೆಯೇ ಉತ್ತಮ ಗುಣಮಟ್ಟದ ಸಿರಿಧಾನ್ಯ ಬೀಜ ಉತ್ಪಾದನೆ, ಹೊಸ ತಳಿ ಅಭಿವೃದ್ಧಿ ಹಾಗೂ ಸಿರಿಧಾನ್ಯ



ರಫ್ತಿಗೆ ಅನುಕೂಲ ಆಗುವಂತೆ ಸಿರಿಧಾನ್ಯ ಬೆಳೆಗೆ ಪ್ರೋತ್ಸಾಹದಾಯಕವಾಗಿ ಅಗತ್ಯ ಕೇಂದ್ರವನ್ನು ರಾಜ್ಯ ಸರ್ಕಾರ ಸ್ಥಾಪಿಸಲಿದೆ ಎಂದು ಇದೇ ಸಂದರ್ಭದಲ್ಲಿ ಸಿಎಂ ಭರವಸೆ ನೀಡಿದರು. ಎಲ್ಲಿ ಮಳೆ ಕಡಿಮೆ ಬೀಳುತ್ತದೆಯೋ, ಭೂಮಿಯ ಫಲವತ್ತತೆ ಕಡಿಮೆ ಇರುವ ಪ್ರದೇಶಗಳಲ್ಲೂ ಬೆಳೆಯಬಹುದಾದ ಸಿರಿಧಾನ್ಯ ಉತ್ತಮ ಆರೋಗ್ಯಕ್ಕೆ ಬಹಳ ಸಹಕಾರಿ.

ಪುಟ ↘ 2

# ರಾಣೆಬೆನ್ನೂರು ತಹಶೀಲ್ದಾರ್ ಹನುಮಂತ ಶಿರಹಟ್ಟಿ ಲೋಕ ಬಲೆಗೆ

» ಹಾವೇರಿ



ತನ್ನ ಜೀಪ್ ಚಾಲಕನ ಮೂಲಕ 12 ಸಾವಿರ ರೂಪಾಯಿ ಲಂಚ ಸ್ವೀಕರಿಸುತ್ತಿದ್ದ ರಾಣೆಬೆನ್ನೂರು ತಹಶೀಲ್ದಾರ್ ಹನುಮಂತ ಶಿರಹಟ್ಟಿ ಅವರು ಶುಕ್ರವಾರ ರೆಡ್ ಹ್ಯಾಂಡ್ ಆಗಿ ಲೋಕಾಯುಕ್ತರ ಬಲೆಗೆ ಸಿಕ್ಕಿ ಬಿದ್ದಿದ್ದಾರೆ. ಅಕ್ರಮವಾಗಿ ಮರಳು ಸಾಗಣೆ ಮಾಡುತ್ತಿದ್ದ ಎರಡು ಲಾರಿಗಳನ್ನು ಬಿಡಲು ತಹಶೀಲ್ದಾರ್ ಹನುಮಂತ ಶಿರಹಟ್ಟಿ ಅವರು 12 ಸಾವಿರ ರೂಪಾಯಿ ಲಂಚಕ್ಕೆ ಬೇಡಿಕೆ ಇಟ್ಟಿದ್ದರು. ಅದರಂತೆ ಇಂದು ಅವರ ಜೀಪ್ ಚಾಲಕ ಮಾಲತೇಶ್ ಮಡಿವಾಳರ 12 ಸಾವಿರ ರೂಪಾಯಿ ಪಡೆದುಕೊಂಡು, ರಾಣೆಬೆನ್ನೂರು ನಗರದ ವೀರಭದ್ರೇಶ್ವರ ಬಡಾವಣೆಯಲ್ಲಿರುವ ತಹಶೀಲ್ದಾರ್ ಮನೆಯಲ್ಲಿ ಹನುಮಂತ ಶಿರಹಟ್ಟಿ ಅವರಿಗೆ ಕೊಡುವ ವೇಳೆ ಲೋಕಾಯುಕ್ತ ಪೊಲೀಸರಿಗೆ ಸಿಕ್ಕಿ ಬಿದ್ದಿದ್ದಾರೆ. ರಾಣೆಬೆನ್ನೂರಿನ ಮಂಜುನಾಥ್ ವಾಲೀಕಾರ ಅವರಿಗೆ ಸೇರಿದ ಎರಡು ಲಾರಿಗಳು ಅಕ್ರಮ ಮರಳು ಸಾಗಣೆ ಮಾಡುತ್ತಿವೆ ಎಂಬ ಆರೋಪದ ಮೇಲೆ ಇತ್ತೀಚೆಗೆ ವಶಕ್ಕೆ ಪಡೆಯಲಾಗಿತ್ತು. ಈ ಎರಡು ಲಾರಿಗಳನ್ನು ಬಿಡುಗಡೆ ಮಾಡಲು ತಹಶೀಲ್ದಾರ್ 12 ಸಾವಿರ ರೂಪಾಯಿಗೆ ಬೇಡಿಕೆ ಇಟ್ಟಿದ್ದರು. ಲೋಕಾಯುಕ್ತ ಡಿವೈಎಸ್ ಪಿ ಚಂದ್ರಶೇಖರ್ ನೇತೃತ್ವದಲ್ಲಿ ಇಂದು ತಹಶೀಲ್ದಾರ್ ಮನೆ ಮೇಲೆ ದಾಳಿ ನಡೆಸಿದ ಲೋಕಾಯುಕ್ತ ಪೊಲೀಸರು, ಹನುಮಂತ ಶಿರಹಟ್ಟಿ ಹಾಗೂ ಮಾಲತೇಶ್ ಮಡಿವಾಳರ ಅವರನ್ನು ವಶಕ್ಕೆ ಪಡೆದಿದ್ದಾರೆ.

## ಪ್ರಮುಖ ಸುದ್ದಿ

# ನನ್ನ ಉಸಿರು ಇರುವವರೆಗೆ ಮೊಳಕಾಲ್ಮುರು ಕ್ಷೇತ್ರದ ಜನತೆಯನ್ನು ನಾನು ಮರೆಯುವುದಿಲ್ಲ: ಬಿ.ಶ್ರೀರಾಮುಲು

» ತಳಕು

ಮೊಳಕಾಲ್ಮೂರು ಕ್ಷೇತ್ರದಲ್ಲಿ ಸಾಕಷ್ಟು ಅಭಿವೃದ್ಧಿ ಕಾರ್ಯಗಳನ್ನು ಮಾಡಿದ್ದೇನೆ ಸುಮಾರು 2000 ಕೋಟಿ ಅನುದಾನವನ್ನ ತಂದು ಅಭಿವೃದ್ಧಿ ಪಡಿಸಿದ್ದೇನೆ ಎಂದು ಮಾಜಿ ಸಚಿವ ಬಿ ಶ್ರೀರಾಮುಲು ಹೇಳಿದ್ದಾರೆ.

ಅವರು ಶುಕ್ರವಾರ ಹೋಬಳಿಯ ಬುಕ್ಕಾಂಬುಧಿ ಗ್ರಾಮದಲ್ಲಿ ನೂತನವಾಗಿ ನಿರ್ಮಿಸಲಾಗಿರುವ ಶ್ರೀ ದುಗಾರ್ಂಬಿಕಾ ದೇವಿ ಪ್ರಾರಂಭೋತ್ಸವ ಹಾಗೂ ಜೀರ್ಣೋದ್ಧಾರ ಕಾರ್ಯಕ್ರಮ ಮತ್ತು ಶ್ರೀ ಆಂಜನೇಯ ಸ್ವಾಮಿ ವಿಗ್ರಹ ಪ್ರಾಣ ಪ್ರತಿಷ್ಠಾಪನ ಮತ್ತು ಧ್ವಜ ಸ್ಥಂಭ ಸ್ಥಾಪನೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ವಿಶೇಷ ಪೂಜೆ ಸಲ್ಲಿಸಿ ಮಾತನಾಡಿದ್ದಾರೆ.

ಪ್ರಧಾನ ಮಂತ್ರಿ ನರೇಂದ್ರ ಮೋದಿಜಿ ಅವರ ಜನಪರ ಕಾರ್ಯಗಳನ್ನು ಮೆಚ್ಚಿ ಲೋಕಸಭಾ ಚುನಾವಣೆಯಲ್ಲಿ ಅತಿ ಹೆಚ್ಚು ಸೀಟುಗಳನ್ನು ಗೆಲ್ಲುವ ಭರವಸೆಯಲ್ಲಿದ್ದೇವೆ ಚಿತ್ರದುರ್ಗ ದಾವಣಗೆರೆ ಬೀದರ್ ಹಾವೇರಿವರೆಗೆ ಲೋಕಸಭಾ ಕಳೆದ





ಬಾರಿಗಿಂತ ಹೆಚ್ಚಿನ ಸೀಟುಗಳು ಗೆಲ್ಲಿಸುತ್ತೇವೆ ಪ್ರಧಾನಿ ನರೇಂದ್ರ ಮೋದಿಜಿ ಕಾರ್ಯ ಸಾಧನೆ ಮತ್ತು ಅಯೋಧ್ಯೆಯಲ್ಲಿ ಶ್ರೀರಾಮ ಮಂದಿರ ಉದ್ಘಾಟನೆ ಸೇರಿದಂತೆ ಪ್ರಧಾನ ಮಂತ್ರಿ ನರೇಂದ್ರ ಮೋದಿಜಿ ಉತ್ತಮ ಕಾರ್ಯವನ್ನು ಮಾಡುವ ಮೂಲಕ ಇಡೀ ದೇಶವನ್ನೇ ಅಭಿವೃದ್ಧಿಪಥದಂತೆ ಕೊಂಡೊಯ್ಯುತ್ತಿದ್ದಾರೆ ಎಂದರು.ಇದೇ ಸಂದರ್ಭದಲ್ಲಿ ಮಂಡಲ ಅಧ್ಯಕ್ಷ ಈ ರಾಮರೆಡ್ಡಿ, ಬಿಜೆಪಿ ರಾಜ್ಯ ಕಾರ್ಯಕಾರಣಿ ಸದಸ್ಯ ಪಾಪೇಶ್ ನಾಯಕ, ನಾಯಕನಹಟ್ಟಿ ಮಂಡಲ ಪ್ರಧಾನ ಕಾರ್ಯದರ್ಶಿ ಬೆಂಕಿ ಗೋವಿಂದಪ್ಪ, ಚನ್ನಗಾನಹಳ್ಳಿ ಮಲ್ಲೇಶ್, ಮಂಡಲ ಕಾರ್ಯದರ್ಶಿ ಎಚ್ ವಿ ಪ್ರಕಾಶ್, ದೇವರೆಡ್ಡಿಹಳ್ಳಿ ಗ್ರಾಮ ಪಂಚಾಯತಿ ಅಧ್ಯಕ್ಷ ಶ್ರೀಮತಿ ದಿವ್ಯ ಪ್ರಕಾಶ್, ಉಪಾಧ್ಯಕ್ಷ ಅಶೋಕ್, ಗ್ರಾಮ ಪಂಚಾಯತಿಯ ಸರ್ವ ಸದಸ್ಯರು ಮತ್ತು. ಶ್ರೀ ಆಂಜನೇಯ ಸ್ವಾಮಿ ದೇವಸ್ಥಾನದ ಕಾರ್ಯಕಾರಿ ಸಮಿತಿ ಅಧ್ಯಕ್ಷರಾದ ಎಸ್ ಪ್ರಕಾಶ್ ಉಪಾಧ್ಯಕ್ಷ ಗುರುಸ್ವಾಮಿ, ಕಾರ್ಯದರ್ಶಿ ಬಿಎಲ್ ನಾಗರಾಜ್, ಖಜಾಂಚಿ ಡಿ ಟಿ ತಿಮ್ಮಾರೆಡ್ಡಿ, ಮತ್ತು ಸರ್ವ ಸದಸ್ಯರು, ಹಾಗೂ ಶ್ರೀ ದುಗಾರ್ಂಬಿಕ ದೇವಿ ದೇವಸ್ಥಾನದ ಹಟ್ಟಿಯ ಯಜಮಾನರಾದ ಮಾರಣ್ಣ, ಎಂ ರಾಜಣ್ಣ, ಹೊನ್ನೂರಪ್ಪ ಮಲ್ಲೇಶ್, ಎಚ್. ಹೊನ್ನೂರಪ್ಪ, ತಿಪ್ಪೇಸ್ವಾಮಿ, ಲೋಕೇಶ್, ತಿಪ್ಪೇಶ್, ನಾಗೇಂದ್ರಪ್ಪ, ಮುಖ್ಯೋಪಾಧ್ಯಾಯ ಪಿ ಟಿ ತಿಪ್ಪೇಸ್ವಾಮಿ, ಎಚ್ ನಾಗರಾಜ್, ಮಹಾಂತೇಶ್, ಸೇರಿದಂತೆ ಊರಿನ ಗ್ರಾಮಸ್ಥರು ಇದ್ದರು

**ಫಾಸ್ಟ್ ನ್ಯೂಸ್**

### ಇಂದಿರಾ ಕ್ಯಾಂಟೀನ್ ಮತ್ತು ಮಧ್ಯಾಹ್ನದ ಶಾಲಾ ಊಟದಲ್ಲಿ ಸಿರಿಧಾನ್ಯ ಬಳಕೆ: ಸಿಎಂ



» **ಮೊದಲ ಪುಟದಿಂದ**

ಇದಕ್ಕಾಗಿ ರಾಜ್ಯ ಸರ್ಕಾರ ನಿರಂತರವಾಗಿ ಸಿರಿಧಾನ್ಯ ಮೇಳವನ್ನು ನಿರಂತರವಾಗಿ ಆಯೋಜಿಸುತ್ತಿದೆ ಎಂದರು. ಸಾರಜನಕ, ಲವಣ, ವಿಟಮಿನ್ ಮತ್ತು ನಾರಿನ ಅಂಶಗಳು ಸಿರಿಧಾನ್ಯಗಳಲ್ಲಿ ಹೆಚ್ಚಾಗಿವೆ. ಇವತ್ತಿನ ಹಲವು ಕಾಯಿಲೆಗಳಿಗೆ ರಸಾಯನಿಕ ಮಿಶ್ರಿತ ಆಹಾರ ಪದಾರ್ಥ ಸೇವನೆ ಕೂಡ ಒಂದು ಪ್ರಮುಖ ಕಾರಣವಾಗಿದೆ ಎಂದು ಅಧ್ಯಯನಗಳು ಹೇಳುತ್ತಿವೆ. ಇದಕ್ಕೆ ಸಾವಯವ ಸಿರಿಧಾನ್ಯ ಸೇವನೆ ಉತ್ತಮ ಪರಿಹಾರ ಆಗುತ್ತಿದೆ ಎಂದರು. 2004 ರಲ್ಲಿ ಸಾವಯವ ಕೃಷಿ ನೀತಿ, 2014 ರಲ್ಲಿ ಪರಿಷ್ಕೃತ ಸಾವಯವ ಕೃಷಿ ನೀತಿಯನ್ನು ರಾಜ್ಯದಲ್ಲಿ ಜಾರಿಗೊಳಿಸಲಾಗಿದೆ. ಆ ಮೂಲಕ ಸವಯವ ಮತ್ತು ಸಿರಿಧಾನ್ಯ ಬೆಳೆ ಬೆಳೆಯಲು ನಮ್ಮ ಸರ್ಕಾರ ನಿರಂತರವಾಗಿ ಉತ್ತೇಜನ ನೀಡುತ್ತಿದೆ. ಇದರಿಂದ ಜನರ ಆರೋಗ್ಯಕ್ಕೂ ಬಹಳ ಸಹಕಾರಿಯಾಗುತ್ತಿದೆ ಎಂದು ಮುಖ್ಯಮಂತ್ರಿಗಳು ವಿವರಿಸಿದರು. ಇತ್ತೀಚಿನ ವರ್ಷಗಳಲ್ಲಿ ಸಾವಯವ ಮತ್ತು ಸಿರಿಧಾನ್ಯ ಹೆಚ್ಚು ಜನಪ್ರಿಯ ಆಗುತ್ತಿದೆ. ಭಾರತ ಕೃಷಿ ಪ್ರಧಾನ ದೇಶವಾದ್ದರಿಂದ ಆಹಾರ ಸ್ವಾವಲಂಭನೆ ಸಾಧಿಸಲು ಇಂದಿರಾಗಾಂಧಿ ಅವರ ಅವಧಿಯಲ್ಲಿ ಹಸಿರು ಕ್ರಾಂತಿ ನಡೆಸಲಾಯಿತು. ಪ್ರತಿಯೊಬ್ಬರಿಗೂ ಆಹಾರ ಒದಗಿಸಲು ಹಸಿರು ಕ್ರಾಂತಿ ನೆರವಾಯಿತು ಎಂದರು. ಕೃಷಿ ಸಚಿವರಾದ ಎನ್.ಚಲುವರಾಯಸ್ವಾಮಿ ಅವರು ಅಧ್ಯಕ್ಷತೆ ವಹಿಸಿದ್ದ ಕಾರ್ಯಕ್ರಮದಲ್ಲಿ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ, ಪಶು ಸಂಗೋಪನಾ ಸಚಿವ ಕೆ.ವೆಂಕಟೇಶ್, ಆರೋಗ್ಯ ಸಚಿವ ದಿನೇಶ್ ಗುಂಡೂರಾವ್, ಮುಖ್ಯಮಂತ್ರಿಗಳ ರಾಜಕೀಯ ಸಲಹೆಗಾ ರರಾದ ಬಿ.ಆರ್.ಪಾಟೀಲ್, ಉತ್ತರ ಪ್ರದೇಶ ಸರ್ಕಾರದ ಕೃಷಿ ಸಚಿವರಾದ ಸೂರ್ಯ ಪ್ರತಾಪ್ ಸಾಹಿ, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ನಸೀರ್ ಅಹ್ಮದ್, ಶಾಸಕರುಗಳಾದ ವಿನಯ್ ಕುಲಕರ್ಣಿ, ಸುಧಾಮ ದಾಸ್, ರಾಜೂಗೌಡ, ವಿನಯ್ ಕುಲಕರ್ಣಿ, ದಿನೇಶ್ ಗೂಳಿಗೌಡ, ಕೋನರೆಡ್ಡಿ ಸೇರಿ ಇಲಾಖೆಯ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

### ನಗರಸಭೆ ಆಸ್ತಿ ತೆರಿಗೆ ಅವಾಂತರ ಸರಿಪಡಿಸಿರಿ ಸಾಮಾಜಿಕ ಕಾರ್ಯಕರ್ತ ಕಸವನಹಳ್ಳಿರಮೇಶ್




» **ಹಿರಿಯೂರು**

ನಗರದ ನಾಗರೀಕರಾದ ನೀವು ನಗರಸಭೆಗೆ ಪಾವತಿಸುವ ಆಸ್ತಿ ತೆರಿಗೆ,ನೀರಿನ ಕಂದಾಯ, ಮಳಿಗೆ ಬಾಡಿಗೆ ಇನ್ನಿತರೆ ಯಾವುದೇ ತೆರಿಗೆ ಆಗಲಿ ಅಥವಾ ಶುಲ್ಕ ಇರಲಿ ರಸೀದಿಗಳನ್ನು ದಯಮಾಡಿ ಭದ್ರವಾಗಿ ಇಟ್ಟುಕೊಳ್ಳಿ ಎಂಬುದಾಗಿ ಸಾಮಾಜಿಕ ಕಾರ್ಯಕರ್ತ ಕಸವನಹಳ್ಳಿರಮೇಶ್ ನಗರಸಭೆ ತೆರಿಗೆದಾರರಲ್ಲಿ ಮನವಿ ಮಾಡಿದ್ದಾರೆ.ಬಹುತೇಕ ತೆರಿಗೆದಾರರಿಂದ ನಿತ್ಯಬರುತ್ತಿರುವ ದೂರುಗಳೇನೆಂದರೆ ನಗರಸಭೆಯಲ್ಲಿ ನಾಗರೀಕರು ಪಾವತಿಸಲಾದ ಹಣವನ್ನು ಸಂಬಂಧಪಟ್ಟ ಖಾತೆಗಳಿಗೆ ಕಾಲಕಾಲಕ್ಕೆ ಆಯಾ ಹಣಕಾಸು ವರ್ಷದಲ್ಲಿ ಅಪ್ಡೇಟ್ ಮಾಡದೇ ಇರುವುದರಿಂದ, ನಾಗರೀಕರು ಸಕಾಲದಲ್ಲಿ ತೆರಿಗೆ ಪಾವತಿಸಿದ್ದಾಗ್ಯೂ ನಗರಸಭೆ ಲೆಡ್ಜರ್ ಗಳಲ್ಲಿ ಕಂದಾಯ ಬಾಕಿ ಹಾಗೇ ಉಳಿದಿರುತ್ತದೆ. ನೀವೇನಾದರೂ ರಸೀದಿ ಕಳೆದುಕೊಂಡರೆ, ನಿಮ್ಮ ಮಕ್ಕಳು, ಮೊಮ್ಮಕ್ಕಳು ಮತ್ತೊಮ್ಮೆ ದಂಡ ಸಹಿತ ತೆರಿಗೆ ಕಟ್ಟಬೇಕಾಗುತ್ತದೆ. ವಾಸ್ತವ ಸತ್ಯ ಏನೆಂದರೆ, ತೆರಿಗೆದಾರ ಕಟ್ಟಿದ ತೆರಿಗೆ ಹಣದ ಒಂದು ಚಲನ್ ಕಾಪಿ ಬ್ಯಾಂಕಿನಿಂದ ನಗರಸಭೆಗೆ ಬರುತ್ತದೆ, ಮತ್ತೊಂದು ಕಾಪಿಯನ್ನು ಜೆರಾಕ್ಸ್ ಮಾಡಿಸಿ ತೆರಿಗೆದಾರರು ಟಪಾಲು ಶಾಖೆಗೆ ಕೊಟ್ಟು ಸ್ವೀಕೃತಿ ಪಡೆದರೂ ಕೂಡ ಸಂಬಂಧಿಸಿದ ಕಂದಾಯ ಶಾಖೆ ನೌಕರರು ಮಾಡುವ ಕರ್ತವ್ಯ ನಿರ್ಲಕ್ಷ್ಯ ನಿಮ್ಮನ್ನು ಇಕ್ಕಟ್ಟಿಗೆ ಸಿಲುಕಿಸಿ ಮತ್ತೊಮ್ಮೆ ದಂಡ ಸಹಿತ ನೀವು ಬಾಕಿ ಕಂದಾಯ ಕಟ್ಟಲು ಬಾಧ್ಯಸ್ಥರಾಗುತ್ತೀರಿ. ಹೀಗಿದ್ದರೂ ಸಹ ಅಲ್ಲಿನ ಸಂಬಂಧಿಸಿದ ವಿಷಯನಿರ್ವಾಹಕರು ಕಾಲ ಕಾಲಕ್ಕೆ ಆಯಾ ಲೆಕ್ಕ ಶೀರ್ಷಿಕೆಗೆ ಹಣ ಸಂದಾಯ ಆಗಿರುವ ಬಗ್ಗೆ ಪೋಸ್ಟಿಂಗ್ ಮಾಡುವುದಿಲ್ಲ. ಇದನ್ನ ಮೇಲ್ವಿಚಾರಕರು ಕೂಡ ನೋಡುವುದಿಲ್ಲ. ಸಾರ್ವಜನಿಕರು ಪ್ರಶ್ನೆ ಮಾಡುವ ತನಕ ಅಲ್ಲಿನ ಸಿಬ್ಬಂದಿ ಎಚ್ಚೆತ್ತುಕೊಳ್ಳುವುದಿಲ್ಲ ಎಂಬುದಾಗಿ ಹೇಳಿದ್ದಾರೆ.ಆಯಾ ಹಣಕಾಸು ವರ್ಷದ ಆಡಿಟ್ ಯಾವ ರೀತಿ ನಡೆಯುತ್ತಿದೆ ಎಂದು ಅನುಮಾನ ಬರುತ್ತದೆ.

# ಜಿಲ್ಲೆಯ ಕಾಲೇಜುಗಳಲ್ಲಿ ಯುವನಿಧಿ ನೋಂದಣಿಗೆ ವಿಶೇಷ ಅಭಿಯಾನ: ಜಿಲ್ಲಾಧಿಕಾರಿ ದಿವ್ಯಪ್ರಭು

» **ಚಿತ್ರದುರ್ಗ**

ರಾಜ್ಯಸರ್ಕಾರದಗ್ಯಾರಂಟಿಯೋಜನೆಗಳಲ್ಲಿ ಒಂದಾದ ಯುವನಿಧಿ ಯೋಜನೆಯನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವ ನಿಟ್ಟಿನಲ್ಲಿ ಜಿಲ್ಲೆಯ ಎಲ್ಲಾ ಕಾಲೇಜುಗಳಲ್ಲಿ ವಿಶೇಷ ಅಭಿಯಾನ ಆಯೋಜಿಸುವ ಮೂಲಕ ಹೆಚ್ಚಿನ ಸಂಖ್ಯೆಯಲ್ಲಿ ಅರ್ಹ ಫಲಾನುಭವಿಗಳನ್ನು ಯುವನಿಧಿ ಯೋಜನೆಗೆ ನೋಂದಣಿ ಮಾಡುವಂತೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಹೇಳಿದರು.

ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಶುಕ್ರವಾರ ಯುವನಿಧಿ ಯೋಜನೆ ಕುರಿತು ಜಿಲ್ಲೆಯ ತಹಶೀಲ್ದಾರರು ಹಾಗೂ ಜಿಲ್ಲೆಯ ಎಲ್ಲಾ ಪದವಿ, ಡಿಪ್ಲೊಮಾ ಕಾಲೇಜು ಪ್ರಾಂಶುಪಾಲರೊಂದಿಗೆ ಸಭೆ ನಡೆಸಿ ಅವರು ಮಾತನಾಡಿದರು.

2022-23ನೇ ಶೈಕ್ಷಣಿಕ ಸಾಲಿನಲ್ಲಿ ವ್ಯಾಸಂಗ ಮಾಡಿ, 2023 ತೇರ್ಗಡೆಯಾದ ಮತ್ತು ಫಲಿತಾಂಶ ಪ್ರಕಟಗೊಂಡ 180 ದಿನ ಅಥವಾ 6 ತಿಂಗಳ ಒಳಗಡೆ ಕೆಲಸ ದೊರೆಯದ ನಿರುದ್ಯೋಗಿ ಅರ್ಹ ಪದವೀಧರರಿಗೆ ರೂ. 3.000 ಹಾಗೂ ಡಿಪ್ಲೋಮಾ ತೇರ್ಗಡೆಯಾದವರಿಗೆ ರೂ. 1.500 ಮಾಸಿಕ ನಿರುದ್ಯೋಗ ಭತ್ಯೆಯನ್ನು ಆಧಾರ ಜೋಡಣೆಯ ಅಭ್ಯರ್ಥಿಗಳ ಬ್ಯಾಂಕ್ ಖಾತೆಗೆ ನೇರ





ನಗದು ವರ್ಗಾವಣೆ ಮಾಡಲಾಗುವುದು. ಈ ಹಿನ್ನಲೆಯಲ್ಲಿ ಈ ಯೋಜನೆಗೆ ಅರ್ಹ ಫಲಾನುಭವಿಗಳನ್ನು ಹೆಚ್ಚಿನ ಸಂಖ್ಯೆಯಲ್ಲಿ ನೋಂದಣಿ ಮಾಡಲು, ಯುವ ಜನರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಜಿಲ್ಲೆಯ ಕಾಲೇಜುಗಳು ಪ್ರಾಂಶುಪಾಲರು ನೋಂದಣಿಗಾಗಿ ವಿಶೇಷ ಅಭಿಯಾನ ನಡೆಸಿ, ಅಗತ್ಯ ಸಹಕಾರ ನೀಡಬೇಕು ಎಂದು ತಿಳಿಸಿದ ಅವರು, ನೋಂದಣಿ ಅಭಿಯಾನಕ್ಕೆ ನೋಡಲ್ ಅಧಿಕಾರಿಗಳನ್ನು ನೇಮಕ ಮಾಡುವಂತೆ ಸಲಹೆ ನೀಡಿದ ಅವರು, ವಿಶೇಷ ನೋಂದಣಿ ಅಭಿಯಾನಕ್ಕೆ ಕರ್ನಾಟಕ ಒನ್ ಸಿಬ್ಬಂದಿಯನ್ನು ನಿಯೋಜಿಸಲು ಜಿಲ್ಲಾಡಳಿತದಿಂದ ಅಗತ್ಯ ಕ್ರಮಕೈಗೊಳ್ಳಲಾಗುವುದು ಎಂದರು.

ಜ.12ರಂದು ಯುವನಿಧಿ ಯೋಜನೆಗೆ ಚಾಲನೆ: ಯುವನಿಧಿ ಕಾರ್ಯಕ್ರಮದಡಿ ನಿರುದ್ಯೋಗ ಭತ್ಯೆಯ ವಿತರಣಾ ಸಮಾರಂಭವನ್ನು ಇದೇ ಜನವರಿ 12ರಂದು ರಾಜ್ಯದ ಮುಖ್ಯಮಂತ್ರಿಗಳು ಶಿವಮೊಗ್ಗದಲ್ಲಿ ಚಾಲನೆ ನೀಡಲಿದ್ದು, ಈ ಸಮಾರಂಭಕ್ಕೆ ಚಿತ್ರದುರ್ಗ ಜಿಲ್ಲೆಯಿಂದ 5 ಸಾವಿರ ಫಲಾನುಭವಿಗಳನ್ನು ಕಳುಹಿಸಿಕೊಡಲಾಗುತ್ತದೆ. ಹಾಗಾಗಿ ಫಲಾನುಭವಿಗಳನ್ನು ಕಾರ್ಯಕ್ರಮಕ್ಕೆ ಸಜ್ಜುಗೊಳಿಸಬೇಕು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಜಿಲ್ಲಾ ಪಂಚಾಯಿತಿ ಯೋಜನಾ ನಿರ್ದೇಶಕ ಡಾ.ರಂಗಸ್ವಾಮಿ ಮಾತನಾಡಿ, ಜಿಲ್ಲೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಯುವನಿಧಿ ಯೋಜನೆಗೆ ಅರ್ಹ ಫಲಾನುಭವಿಗಳು ನೋಂದಣಿ ಆಗಬೇಕು. ಯುವ ಜನರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಅಗತ್ಯ ಕ್ರಮವಹಿಸಬೇಕು ಎಂದು ತಿಳಿಸಿದರು.

ದಾವಣಗೆರೆ ವಿಶ್ವವಿದ್ಯಾನಿಲಯ ರಿಜಿಸ್ಟ್ರಾರ್ ಸರೋಜಾ ಮಾತನಾಡಿ, ದಾವಣಗೆರೆ ವಿಶ್ವವಿದ್ಯಾನಿಲಯದ ಅಂತಿಮ ಪದವಿ ವಿದ್ಯಾರ್ಥಿಗಳ ವಿವರವನ್ನು ನ್ಯಾಡ್‌ಗೆ ಅಪ್‌ಲೋಡ್ ಮಾಡಲಾಗಿದ್ದು, ನ್ಯಾಡ್‌ಗೆ ಸಂಬಂಧಿಸಿದ ಸಮಸ್ಯೆಗಳು ಇದ್ದಲ್ಲಿ ಸಮಸ್ಯೆ ಪರಿಹರಿಸಲು ಸಂಪೂರ್ಣ ಸಹಕಾರ ನೀಡಲಾಗುವುದು ಎಂದು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಕೆ.ಗೋಪಾಲರೆಡ್ಡಿ, ದಾವಣಗೆರೆ ವಿಶ್ವವಿದ್ಯಾಲಯ ನ್ಯಾಡ್ ನೋಡಲ್ ಅಧಿಕಾರಿ ಪ್ರೊ.ಅನುಪ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್ ಬಣಕಾರ್, ಜಿಲ್ಲೆಯ ತಹಶೀಲ್ದಾರ್‌ಗಳು, ಜಿಲ್ಲೆಯ ಪದವಿ ಕಾಲೇಜುಗಳ ಹಾಗೂ ಡಿಪ್ಲೊಮಾ ಕಾಲೇಜುಗಳ ಪ್ರಾಂಶುಪಾಲರು ಇದ್ದರು.

# ಸರ್ಕಾರ ರೈತರನ್ನು ಚಪ್ಪಲಿಗಿಂತ ಕೀಳಾಗಿ ಕಾಣುತ್ತಿದೆ: ವಾಸುದೇವ ಮೇಟಿ ಆಕ್ರೋಶ

» **ಚಿತ್ರದುರ್ಗ**

ಸರ್ಕಾರಬರಪರಿಹಾರವಾಗಿಹೆಕ್ಟರ್ ಒಂದಕ್ಕೆ 2 ಸಾವಿರ ನೀಡುತ್ತಿದೆ. ಒಂದು ಜೊತೆ ಚಪ್ಪಲಿಯ ಬೆಲೆ 2 ಸಾವಿರ ಇದೆ. ಸರ್ಕಾರ ನಮ್ಮನ್ನು ಚಪ್ಪಲಿಗಿಂತ ಕೀಳಾಗಿ ಕಾಣುತ್ತಿದೆ. ಎಂದು ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ರಾಜ್ಯಾಧ್ಯಕ್ಷರಾದ ವಾಸುದೇವ ಮೇಟಿ ಸರ್ಕಾರದ ಮೇಲೆ ಕಿಡಿ ಕಾರಿದ್ದಾರೆ.

ಚಿತ್ರದುರ್ಗ ನಗರದ ಪತ್ರಿಕಾ ಭವನದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ಅಭಿವೃದ್ಧಿ ಕಾಣೆಯಾಗಿದೆ.ನೀರಾವರಿಸಚಿವರು ಆಗಿರುವ ಉಪ ಮುಖ್ಯಮಂತ್ರಿಗಳು ಯಾವುದೇ ಜಿಲ್ಲೆಗೂ ಭೇಟಿ ಮಾಡಿಲ್ಲ. ಅವರು ಕೇವಲ ಬೆಂಗಳೂರಿಗೆ ಸೀಮಿತರಾಗಿದ್ದಾರೆ. ಬರಗಾಲ ನಿರ್ವಹಣೆಯಲ್ಲಿ ರಾಜ್ಯ ಸರ್ಕಾರ ಸಂಪೂರ್ಣ ವಿಫಲವಾಗಿದೆ.. ಜನರು ಗುಳೇವು ಹೋಗುವ ದಿನಗಳು ದೂರವಿಲ್ಲ. ರಾಜ್ಯ ಸಂಪೂರ್ಣ ಬರದಿಂದ ಆವರಿಸಿದೆ.. ಜಾನುವಾರುಗಳಿಗೆ ಮೇವಿನ ಅಭಾವ ಉಂಟಾಗಿದೆ.. ಕೂಡಲೇ ಸರ್ಕಾರ ಮೇವು ಬ್ಯಾಂಕ್‌ಗಳನ್ನು, ಗೋ-ಶಾಲೆಗಳನ್ನು ತೆರೆಯಬೇಕು ಎಂದು ಸರ್ಕಾರವನ್ನು ಆಗ್ರಹಿಸಿದರು.

ರಾಜ್ಯದ ನೀರಾವರಿ ಸಚಿವರಾದ ಡಿ.ಕೆ.ಶಿವಕುಮಾರ್ ಇಲಾಖೆಯನ್ನು ಸಮರ್ಥವಾಗಿ ನಿಭಾಯಿಸುವಲ್ಲಿ ವಿಫಲರಾಗಿದ್ದಾರೆ. ನೀರಾವರಿ ಯೋಜನೆಗಳನ್ನು ಪೂರ್ಣ ಮಾಡುವ ಕಡೆಗೆ ಗಮನ ನೀಡುತ್ತಿಲ್ಲ ಇದರಿಂದ ಡಿ.ಕೆ ಶಿವಕುಮಾರ್



ರವರಿಂದ ರಾಜೀನಾಮೆ ಪಡೆದು ನುರಿತ ಸಚಿವರನ್ನು ನೀರಾವರಿ ಸಚಿವರನ್ನಾಗಿ ನೇಮಕ ಮಾಡಬೇಕೆಂದು ಮುಖ್ಯಮಂತ್ರಿಗಳಲ್ಲಿ ಒತ್ತಾಯ ಮಾಡಿದರು.

ರಾಜ್ಯದ ಎಲ್ಲಾ ಬಿಜೆಪಿ ಸಂಸದರಲ್ಲಿ ರಾಜ್ಯದಲ್ಲಿನ ದೊಡ್ಡ ನದಿಗಳಿಂದ ರೈತರಿಗೆ ನೀರಾವರಿ ಯೋಜನೆ ಕಲ್ಪಿಸಲು ಯೋಜನೆ ರೂಪಿಸಲು ಪ್ರಧಾನ ಮಂತ್ರಿಗಳನ್ನು ಒತ್ತಾಯ ಮಾಡಬೇಕಿದೆ ಎಂದು ರಾಮಚಂದ್ರಪ್ಪ ಒತ್ತಾಯಿಸಿದರು. ಸರ್ಕಾರಬರಪರಿಹಾರವಾಗಿಹೆಕ್ಟರ್ ಒಂದಕ್ಕೆ 2 ಸಾವಿರ ನೀಡುತ್ತಿದೆ. ಒಂದು ಜೊತೆ ಚಪ್ಪಲಿಯ ಬೆಲೆ 2 ಸಾವಿರ ಇದೆ. ಸರ್ಕಾರ ನಮ್ಮನ್ನು ಚಪ್ಪಲಿಗಿಂತ ಕೀಳಾಗಿ ಕಾಣುತ್ತಿದೆ. ಬೇರೆ ಕಾಮಗಾರಿಗಳಿಗೆ ಕೋಟಿಗಟ್ಟಲೇ ಹಣವನ್ನು ನಿಡುವ ಸರ್ಕಾರ ರೈತರಿಗೆ ನೀಡುವಾಗ ಮಾತ್ರ ಹಿಡಿತವನ್ನು ಸಾಧಿಸುತ್ತದೆ. ಇದು ಸರಿಯಾದ ಕ್ರಮವಲ್ಲ ನಾವು ಎಲ್ಲರಿಗೂ ಅನ್ನವನ್ನು ನೀಡುವಂತ ಅನ್ನದಾತರು ನಮ್ಮ ಬಗ್ಗೆ ಈ ರೀತಿಯಾದ ಹಗುರವಾದ ನಿರ್ಧಾರ ಸರಿಯಲ್ಲ ಇದರ ಬಗ್ಗೆ ಆಲೋಚನೆ ಮಾಡಿ ಎಕರೆಗೆ 20 ಸಾವಿರೂ ಪರಿಹಾರವನ್ನು ನೀಡಬೇಕು ಅದು ಅಲ್ಲದೆ ಬೆಳೆ ವಿಮೆ ಸಹಾ ಬಂದಿಲ್ಲ ಇದರ ಬಗ್ಗೆಯೂ ಸಹಾ ಸರ್ಕಾರ ಆಲೋಚನೆ ಮಾಡಬೇಕಿದೆ ರೈತರನ್ನು ಗೋಳಿಸಬಾರದೆಂದು ಮುಖ್ಯಮಂತ್ರಿಗಳಿಗೆ ಕಿವಿ ಮಾತು ಹೇಳಿದರು. ನರೇಗಾ ಯೋಜನೆಯಲ್ಲಿ ಜನರಿಗೆ ಕೆಲಸಗಳನ್ನು ನೀಡಲು ಕ್ರಮ ವಹಿಸಬೇಕು. ಈ ಹಿಂದೆ ವಿದ್ಯುತ್ ಪರಿವರ್ತಕಗಳನ್ನು ಉಚಿತವಾಗಿ ನೀಡುತ್ತಿದ್ದರು.. ಈಗ ರೈತರೇ ಕೊಂಡುಕೊಳ್ಳಬೇಕು ಎಂದು ಆದೇಶ ಮಾಡಿದ್ದಾರೆ ಇದನ್ನು ವಾಪಾಸ್ ಪಡೆಯಬೇಕು ಎಂದ ಅವರು, ಎಲ್ಲವನ್ನು ಜನರೇ ಮಾಡುವುದಾದರೆ ಸರ್ಕಾರ ಏಕೆ ಬೇಕು ಈ ಹಿಂದೆ ಸರ್ಕಾರವೇ ಎಲ್ಲವನ್ನು ಉಚಿತವಾಗಿ ನೀಡುತ್ತಿತ್ತು ಆದರೆ ಹೊಸದಾಗಿ ಕಾನೂನು ತಂದು ಹಣವನ್ನು ಭರ್ತಿ ಮಾಡಿ ಎನ್ನುತ್ತಿದೆ ಇದು ಸರಿಯಾದ ಕ್ರಮವಲ್ಲ ಕೂಡಲೇ ಈ ಕಾನೂನನ್ನು ವಾಪಾಸ್ಸು ಪಡೆಯುವಂತೆ ಸರ್ಕಾರವನ್ನು ಆಗ್ರಹಿಸಿದರು. ಗೋಷ್ಠಿಯಲ್ಲಿ ಜಿಲ್ಲಾಧ್ಯಕ್ಷರಾದ ಲಕ್ಷ್ಮೀಕಾಂತ್, ಪ್ರಕಾಶ್, ಸಂಗಣ್ಣ, ಎಸ್.ಕೆ.ಪೂಜಾರ್, ಬಸವರಾಜ್, ಭೀಮಣ್ಣ, ಮರಳುಸಿದ್ದಪ್ಪ, ಭಗಸಿಂಗ್ ಹನುಮಂತ ಕೆಂಚನಗೌಡ ಸೇರಿದಂತೆ ಇತರರು ಭಾಗವಹಿಸಿದ್ದರು.

### ವೀರಶೈವ ಲಿಂಗಾಯತ ಸಮಾಜದ ಅಧ್ಯಕ್ಷರಾಗಿ ತಿಪ್ಪೇಸ್ವಾಮಿ ಆಯ್ಕೆ



» **ಚಿತ್ರದುರ್ಗ**

ವೀರಶೈವ ಲಿಂಗಾಯತ ಸಮಾಜದ ಅಧ್ಯಕ್ಷರಾಗಿ ಎಚ್.ಎನ್. ತಿಪ್ಪೇಸ್ವಾಮಿ ಆಯ್ಕೆಯಾಗಿದ್ದಾರೆ.ಉಪಾಧ್ಯಕ್ಷರಾಗಿ ಶಾಸಕ ಕೆ.ಸಿ.ವಿರೇಂದ್ರ ಅವರ ಸಹೋದರ ಕೆ.ಸಿ.ನಾಗರಾಜ್, ಕಾರ್ಯದರ್ಶಿಯಾಗಿ ಪಿ.ವೀರೇಂದ್ರಕುಮಾರ್ ಜಂಟಿ ಕಾರ್ಯದರ್ಶಿಯಾಗಿ ಜಿತೇಂದ್ರ ಎನ್.ಹುಲಿಕುಂಟೆ ಹಾಗೂ ಖಜಾಂಚಿಯಾಗಿ ಚಳ್ಳಕೆರೆಯ ತಿಪ್ಪೇಸ್ವಾಮಿ ಅವರನ್ನು ಆಯ್ಕೆ ಮಾಡಲಾಗಿದೆ.ಸಮಾಜದ ನಿರ್ದೇಶಕರಾಗಿ ಹಿರಿಯ ನ್ಯಾಯವಾದಿ ಕೆ.ಎನ್.ವಿಶ್ವನಾಥಯ್ಯ, ಸಿದ್ದಾಪುರದ ಎಸ್.ವಿ.ನಾಗರಾಜ್, ಎಸ್.ಷಡಾಕ್ಷರಯ್ಯ, ಡಿ.ಎಸ್. ಮಲ್ಲಿಕಾರ್ಜುನ್, ಪ್ರಕಾಶ್ ಗುತ್ತಿನಾಡು, ಎಸ್.ಪರಮೇಶ್, ಹೊಳಲ್ಕೆರೆಯ ಎಚ್.ಪಿ.ಮುರುಘೇಶ್, ಎಸ್.ವಿ.ಸಿದ್ದೇಶ್, ಶ್ರೀಮತಿ ವೀಣಾ ಸುರೇ[illegible]ಬಾಬು, ಕೆ.ಬಿ.ಬಸವರಾಜಯ್ಯ, ಮಂಜುನಾಥ (ದಾಳಿಂಬೆ), ಡಿ.ವಿ.ಎಸ್. ಪ್ರದೀಪ್, ಶ್ರೀಮತಿ ತ್ರಿವೇಣಿ ಕುಮಾರ್, ಸಾಹಿತಿ ನಿರಂಜನ ದೇವರಮನೆ, ಎಸ್.ವಿ.ಕೊಟ್ರೇಶ್, ಟಿ.ಜಯಪ್ಪ, ಸಿದ್ದಪ್ಪ ಮಲ್ಲಾಪುರ, ಶ್ರೀಮತಿ ಟಿ.ಕೆ.ಲತಾ ಉಮೇಶ್, ಸಿ.ಟಿ. ಜಯಣ್ಣ, ಎಂ.ಯಶವಂತ ನೇಮಕವಾಗಿದ್ದಾರೆ.ವೀರಶೈವ ಲಿಂಗಾಯತ ಸಮಾಜದ ಮಹಾಪೋಷಕರಾದ ಡಾ.ಶ್ರೀ.ಶಿವಮೂರ್ತಿ ಮುರುಘಾ ಶರಣರು ಹೊಸ ಪದಾಧಿಕಾರಿಗಳನ್ನು ಆಯ್ಕೆ ಮಾಡಿದ್ದು, ಎಲ್ಲರೂ ನಗರದ ಶ್ರೀ ನೀಲಕಂಠೇಶ್ವರ ದೇವಸ್ಥಾನದ ಪಕ್ಕದಲ್ಲಿರುವ ಕಚೇರಿಯಲ್ಲಿ ಶುಕ್ರವಾರ ನೂತನ ಜವಾಬ್ದಾರಿ ಪದಗ್ರಹಣ ಮಾಡಿದರು. ಈ ಹಿಂದೆ ಎಲ್.ಬಿ.ರಾಜಶೇಖರಪ್ಪ ಸಮಾಜದ ಅಧ್ಯಕ್ಷರಾಗಿ ಜವಾಬ್ದಾರಿ ನಿಭಾಯಿಸಿದ್ದರು.

### ಪೆಟ್ರೋಲ್, ಡೀಜಲ್ ದರ ಏರಿಕೆ ಮಾಡಿ ಸರ್ಕಾರ ದರೋಡೆಮಾಡುತ್ತಿವೆ

**ಹಿರಿಯೂರು :** ಕೋವಿಡ್ ಸಂಕಷ್ಟ ಪರಿಸ್ಥಿತಿಯನ್ನು ನೆಪವಾಗಿಟ್ಟುಕೊಂಡು ಪೆಟ್ರೋಲ್ ಹಾಗು ಡೀಜಲ್ ದರಗಳನ್ನು ಬೇಕಾಬಿಟ್ಟಿ ಏರಿಕೆ ಮಾಡಿ ಕೇಂದ್ರ ಹಾಗು ರಾಜ್ಯ ಸರ್ಕಾರಗಳು ಜನರನ್ನು ಅಕ್ಷರಶಃ ದರೋಡೆ ಮಾಡುತ್ತಿವೆ ಎಂಬುದಾಗಿ ಖ್ಯಾತ ಸಾಹಿತಿ ಹಾಗೂ ಕಾದಂಬರಿಕಾರರಾದ ಡಿ.ಸಿ.ಪಾಣಿ ಇಂದು ಇಲ್ಲಿ ಬಿಡುಗಡೆ ಮಾಡಿದ ಪತ್ರಿಕಾ ಹೇಳಿಕೆಯಲ್ಲಿ ತಮ್ಮ ಆಕ್ರೋಶವನ್ನು ವ್ಯಕ್ತಪಡಿಸಿದ್ದಾರೆ.

**ಪ್ರಮುಖ ಸುದ್ದಿ**

### ಹೊಸದುರ್ಗ ಹೊರತುಪಡಿಸಿ ಉಳಿದ ತಾಲೂಕುಗಳಿಗೆ ಸರಕಾರ ನೇಮಕ

# ತಾಲೂಕು ಉಸ್ತುವಾರಿಯಾಗಿ ಕೆಎಎಸ್ ಅಧಿಕಾರಿಗಳಿಗೆ ಹೊಣೆ

» **ಮಹದೇವಪುರ ಶಿವಮೂರ್ತಿ**

» **ಪರಶುರಾಂಪುರ**

ರಾಜ್ಯದ ಸಾಮಾಜಿಕ ,ಆರ್ಥಿಕ ಮತ್ತು ಭೌತಿಕ ಅಭಿವೃದ್ಧಿ ಕಾರ್ಯಗಳನ್ನ ಪರಿಣಾಮಕಾರಿಯಾಗಿ ಜಾರಿಗೊಳಿಸುವ ನಿಟ್ಟಿನಲ್ಲಿ ಹಿರಿಯ ಕೆಎಎಸ್ ಅಧಿಕಾರಿಗಳನ್ನ ತಾಲೂಕಿಗೆ ಒಬ್ಬರಂತೆ ನೇಮಕ ಮಾಡಲಾಗಿದೆ.

ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಿಗೆ ಬಲ ನೀಡಿ ಆಡಳಿತ ಅನುಕೂಲ ಕಲ್ಪಿಸಲು ಪ್ರತಿ ತಾಲೂಕುಗಳಿಗೂ ಉಸ್ತುವಾರಿ ಅಧಿಕಾರಿಗಳನ್ನ ಸರಕಾರ ನೇಮಿಸಿದ್ದು , ಜಿಲ್ಲೆಯಲ್ಲಿ ಸದಸ್ಯ ಹೊಸದುರ್ಗ ತಾಲೂಕು ತಾಲೂಕುಗಳಿಗೂ ಉಸ್ತುವಾರಿ ಅಧಿಕಾರಿ ನೇಮಕವಾಗಿದೆ.ಈಲ್ಲೆಯ ಅಭಿವೃದ್ಧಿ ಕಾರ್ಯಗಳನ್ನ ಪರಿಣಾಮಕಾರಿಯಾಗಿ ಜಾರಿಗೊಳಿಸಲು ಎಲ್ಲಾ ತಾಲೂಕುಗಳಿಗೂ ತಲಾ ಒಬ್ಬರು ಕೆಎಎಸ್ ಅಧಿಕಾರಿಗೆ ತಾಲೂಕು ಉಸ್ತುವಾರಿ ಹೊಣೆಗಾರಿಕೆ



| ತಾಲೂಕು ಉಸ್ತುವಾರಿ ಯರ್ಯಾರಿಗೆ | |
|---|---|
| ಚಿತ್ರದುರ್ಗ | ಬಿ.ಟಿ ಕುಮಾರಸ್ವಾಮಿ ಕೆಎಎಸ್ ಅಪರ ಜಿಲ್ಲಾಧಿಕಾರಿ, ಚಿತ್ರದುರ್ಗ. |
| ಚಳ್ಳಕೆರೆ | ಡಾ.ಜಿ.ವಿಶ್ವನಾಥ , ಕೆಎಎಸ್ ವ್ಯವಸ್ಥಾಕ ನಿರ್ದೇಕರು , ಕರ್ನಾಟಕ ಕರಕುಶಲ ಅಭಿವೃದ್ಧಿ ನಿಗಮ, ಬೆಂಗಳೂರು. |
| ಹಿರಿಯೂರು | ಯೋಗೇಶ್ ಟಿ. ಕೆಎಎಸ್ ಜಂಟಿ ಆಯುಕ್ತರು(ಪಶ್ಚಿಮ), ಬೆಂಗಳೂರು. |
| ಹೊಳಲ್ಕೆರೆ | ಡಾ.ಸೌಜನ್ಯ ಕೆಎಎಸ್ ಉಪ ಆಯುಕ್ತರು , ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ,ಬೆಂಗಳೂರು. |
| ಮೊಳಕಾಲ್ಮೂರು | ಹೋಟೆಲ್ ಶಿವಪ್ಪ ಕೆಎಎಸ್ ಆಡಳಿತ ಅಧಿಕಾರಿ , ಇಂದಿರಾ ಗಾಂಧಿ ಮಕ್ಕಳ ಆರೋಗ್ಯ ಸಂಸ್ಥೆ, ಬೆಂಗಳೂರು. |

ನೀಡಲಗಿದೆ.ನೇಮಕವಾದವರ ಜವಾಬ್ದಾರಿ. ಗ್ಯಾರಂಟಿ ಕಾರ್ಯಕ್ರಮಗಳ ಅನುಷ್ಠಾನ ಸೇರಿದಂತೆ 13 ಪ್ರಮುಖ ಜವಬ್ದಾರಿಗಳನ್ನ ತಾಲೂಕು ಉಸ್ತುವಾರಿ ಅಧಿಕಾರಿಗಳು ಗ್ಯಾರಂಟಿ ಕಾರ್ಯಕ್ರಮಗಳ ಯಶಸ್ವಿ ಅನುಷ್ಠಾನದ ಪರಿಶೀಲನೆ , ವಿದ್ಯಾರ್ಥಿ ನಿಲಯಗಳಿಗೆ ಅನಿರೀಕ್ಷಿತ ಭೇಟಿ ಪರಿಶೀಲನೆ , ಶಾಲೆ , ಕಾಲೇಜು ಶಿಕ್ಷಣ ಸಂಸ್ಥೆಗಳಿಗೆ ಭೇಟಿ ಹಾಗೂ ಮೂಲಸೌಕರ್ಯಗಳ ಪರಿಶೀಲನೆ ನಡೆಸಬೇಕು.ಅಂಗನವಾಡಿಗಳಿಗೆ ನಿವೇಶನ ಒದಗಿಸುವುದು, ಕಟ್ಟಡ ನಿರ್ಮಾಣ , ಮಕ್ಕಳ ಅಪೌಷ್ಟಿಕತೆ ನಿವಾರಿಸಲು ಕಾರ್ಯಕ್ರಮ , ಗ್ರಾಮೀಣಾಭಿವೃದ್ಧಿ , ಜಲ ಸಂಪನ್ಮೂಲ ,ಕೃಷಿ , ತೋಟಗಾರಿಕೆ , ಪಿಡೆಬ್ಲೂಡಿ ಇಲಾಕೆಗಳ ಉಸ್ತುವಾರಿ , ಕುಡಿಯುವ ನೀರು , ಮೇವು , ಮನರೇಗಾ , ಬಿಸಿಯೂಟ , ಪಿಂಚಣಿ ಕಾರ್ಯಕ್ರಮಗಳ ಪ್ರಗತಿ ಪರಿಸೀಲನೆ ನಡೆಸುವ ಜವಬ್ದಾರಿ ವಹಿಸಲಾಗಿದೆ.ಗೃಹ ಹಾಗೂ ಸಣ್ಣ ಕೈಗರಿಕೆಗಳನ್ನ ಗುರುತಿಸಿ ಅವರಿಗೆ ಸರಕಾರ ಸವಲತ್ತುಗಳ ಬಗ್ಗೆ ಅರಿವು , ಉದ್ಯೋಗವಕಾಶ , ಖಸಗಿ ಸಾಮಾಜಿಕ ಜವಬ್ದರಿ , ಗ್ರಾಪಂಗಳ ಕರ್ಯನಿರ್ವಹಣೆ ಪರಿಶೀಲನೆಯ ಹೊಣೆ ತಲೂಕು ಉಸ್ತುವಾರಿಗಳ ಹೆಗಲಿಗೆ ಹಾಕಲಾಗಿದೆ.

## ಫಾಸ್ಟ್ ನ್ಯೂಸ್

### ೮ ದಿನಗಳಿಂದ ನಡೆಯುತ್ತಿದ್ದ ಧರಣಿ ಅಂತ್ಯ



» **ಚಿತ್ರದುರ್ಗ**

ಪಿಳ್ಳೆಕೆರನಹಳ್ಳಿಯಲ್ಲಿರುವ ರಿ.ಸ.ನಂ. 38/1 ರ ಜಂಟಿ ಖಾತೆಯಿರುವ ದಲಿತರ ಖಾಸಗಿ ಜಮೀನಿನಲ್ಲಿ ಮೇಲ್ಜಾತಿಯವರ ಕುಮ್ಮಕ್ಕಿನಿಂದ ಕೆಲವರು ಅತಿಕ್ರಮವಾಗಿ ಪ್ರವೇಶಿಸಿ ಗುಡಿಸಲುಗಳನ್ನು ನಿರ್ಮಿಸಿಕೊಂಡಿರುವುದನ್ನು ತೆರವುಗೊಳಿಸುವಂತೆ ಜಿಲ್ಲಾಧಿಕಾರಿ ಕಚೇರಿ ವೃತ್ತದಲ್ಲಿ ಮಹಾನಾಯಕ ದಲಿತ ಸೇನೆ ವತಿಯಿಂದ ಕಳೆದ ಎಂಟು ದಿನಗಳಿಂದ ನಡೆಯುತ್ತಿದ್ದ ಧರಣಿ ಶುಕ್ರವಾರ ಅಂತ್ಯಗೊಂಡಿತು. ಗೋನೂರು ಗ್ರಾಮದ ವಾಸಿಗಳಾದ ಓಬಯ್ಯ, ಪಾಪಣ್ಣ, ನೀಲಮ್ಮ, ಚಂದ್ರಣ್ಣ, ಮಂಜುನಾಥ, ಗೋಪಾಲ ಇವರ ಹೆಸರುಗಳಿಗೆ ಖಾತೆಯಿರುವ ನಾಲ್ಕು ಎಕರೆ 28 ಗುಂಟೆ ಜಮೀನಿನಲ್ಲಿ ಕೆಲವರು ಗುಂಪುಕಟ್ಟಿಕೊಂಡು ಬಂದು ರಾತ್ರೋರಾತ್ರಿ ಗುಡಿಸಲುಗಳನ್ನು ನಿರ್ಮಿಸಿಕೊಂಡಿದ್ದಾರೆ. ಕೇಳಲು ಹೋದಜಮೀನಿನಮಾಲೀಕರಮೇಲೆಜಾತಿನಿಂದಿಸಿ ದೌರ್ಜನ್ಯವೆಸಗಿರುತ್ತಾರೆ. ಈ ಸಂಬಂಧ ಬಡಾವಣೆ ಠಾಣೆಗೆ ದೂರು ನೀಡಲಾಗಿದ್ದು, ತಹಶೀಲ್ದಾರ್ ಹಾಗೂ ಡಿ.ವೈ.ಎಸ್ಪಿ.ರವರ ಗಮನಕ್ಕೂ ತರಲಾಗಿದೆ. ಸಂಬಂಧಪಟ್ಟ ಅಧಿಕಾರಿಗಳನ್ನು ಸೇವೆಯಿಂದ ಅಮಾನತ್ತುಗೊಳಿಸುವಂತೆ ಕಂದಾಯ ಸಚಿವರು ಹಾಗೂ ಗೃಹ ಸಚಿವರಿಗೆ ಮನವಿ ಮಾಡಲಾಗಿದೆ. ಹಾಗಾಗಿ ಅತಿಕ್ರಮಣ ಮಾಡಿರುವವರ ವಿರುದ್ದ ಕಾನೂನು ರೀತಿಯ ಕ್ರಮ ಕೈಗೊಂಡು ದಲಿತರಿಗೆ ಜಮೀನು ಬಿಡಿಸಿಕೊಡಬೇಕೆಂದು ಮಹಾನಾಯಕ ದಲಿತ ಸೇನೆ ವತಿಯಿಂದ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಲಾಯಿತು.ಮಹಾನಾಯಕ ದಲಿತ ಸೇನೆ ರಾಜ್ಯಾಧ್ಯಕ್ಷ ಮಂಜುನಾಥ್ ಎ.ತಾಳಿಕೆರೆ, ರಾಜ್ಯ ಪ್ರಧಾನ ಕಾರ್ಯದರ್ಶಿ ಹೊಳೆಯಪ್ಪ ಕೆ. ಸಾಕ್ಯ, ಜಿಲ್ಲಾ ಯುವ ಘಟಕದ ಅಧ್ಯಕ್ಷ ಪ್ರದೀಪ್‌ಕಾರ್ಯದರ್ಶಿ ಪೆನ್ನೇಶ್ ಕೆ. ಇವರುಗಳು ಈ ಸಂದರ್ಭದಲ್ಲಿ ಹಾಜರಿದ್ದರು.

### ತಾಲ್ಲೂಕು ನಿವೃತ್ತ ಮಾದಿಗ ನೌಕರರ ಕ್ಷೇಮಾಭಿವೃದ್ಧಿ ಸಂಘ ಉದ್ಘಾಟನೆ 7ರಂದು.

» **ಚಳ್ಳಕೆರೆ**

ಚಳ್ಳಕೆರೆ ತಾಲ್ಲೂಕು ನಿವೃತ್ತ ಮಾದಿಗ ನೌಕರರ ಕ್ಷೇಮಾಭಿವೃದ್ದಿ ಸಂಘದ ಉದ್ಘಾಟನಾ ಕಾರ್ಯಕ್ರಮ ಜ.7ರ ಭಾನುವಾರ ಬೆಳಗ್ಗೆ 11ಕ್ಕೆ ಯಾದವ ವಿದ್ಯಾರ್ಥಿ ನಿಲಯ ಆವರಣದಲ್ಲಿ ನಡೆಯಲಿದೆ ಎಂದು ಅಧ್ಯಕ್ಷ ಡಿ.ಟಿ.ಜಗನ್ನಾಥ ತಿಳಿಸಿದ್ದಾರೆ. ಅವರು ಈ ಬಗ್ಗೆ ಮಾಹಿತಿ ನೀಡಿ, ಪ್ರೌಢಶಿಕ್ಷಣ ಮಂಡಳಿಯ ನಿವೃತ್ತ ಕಾರ್ಯದರ್ಶಿ ಎಂ.ರೇವಣಸಿದ್ದಪ್ಪ ಕಾರ್ಯಕ್ರಮ ಉದ್ಘಾಟಿಸಲಿದ್ದು, ಉಪನ್ಯಾಸಕ ಡಾ.ಬಿ.ಎಂ.ಗುರುನಾಥ ಆಶಯಭಾಷಣ ಮಾಡುವರು. ಸಂಘದ ನಾಮಫಲಕವನ್ನು ನಿವೃತ್ತ ಮುಖ್ಯೋಪಾಧ್ಯಾಯ ಟಿ.ತಿಮ್ಮಯ್ಯ ನೆರವೇರಿಸಲಿದ್ದು, 2024ರ ಕ್ಯಾಲೆಂಡರನ್ನು ನಿವೃತ್ತ ಪ್ರಾಂಶುಪಾಲ ಬಿ.ವಿ.ಸಿರಿಯಣ್ಣ ಬಿಡುಗಡೆ ಮಾಡುವರು. ಮುಖ್ಯ ಅತಿಥಿಗಳಾಗಿ ಚೀಫ್ ಇಂಜಿನಿಯರ್ ಕೆ.ಜಿ.ಜಗದೀಶ್, ನಿವೃತ್ತ ಎಇಇ ಜಿ.ಆರ್.ದೇವರಾಜ, ನಿವೃತ್ತ ಎಸ್‌ಬಿಐ ಮ್ಯಾನೇಜರ್ ಎಸ್.ರುದ್ರಮುನಿ, ನಿವೃತ್ತ ಉಪವಿಭಾಗಾಧಿಕಾರಿ ಎಂ.ಮಲ್ಲಿಕಾರ್ಜುನ್, ಪೌರಾಯುಕ್ತ ಸಿ.ಚಂದ್ರಪ್ಪ ಸೇರಿದಂತೆ ಹಲವಾರು ಮುಖಂಡರು ಸಭೆಯಲ್ಲಿ ಭಾಗವಹಿಸುವರು. ನಿವೃತ್ತ ಮಾದಿಗ ನೌಕರರ ಕ್ಷೇಮಾಭಿವೃದ್ದಿ ಸಂಘದ ಉದ್ಘಾಟನಾ ಸಮಾರಂಭಕ್ಕೆ ಸಮುದಾಯ ಮುಖಂಡರು ಭಾಗವಹಿಸುವಂತೆ ಗೌರವಾಧ್ಯಕ್ಷ ಟಿ.ಚೌಡಣ್ಣ, ಉಪಾಧ್ಯಕ್ಷ ಡಿ.ರಾಮಣ್ಣ, ಕಾರ್ಯದರ್ಶಿ ವೈ.ಆನಂದಮೂರ್ತಿ, ಖಜಾಂಚಿ ಎಚ್.ಜಯಣ್ಣ ಮನವಿ ಮಾಡಿದ್ದಾರೆ.

### ಹೊಸದುರ್ಗದಲ್ಲಿ ಜ.7 ರಂದು ಕನಕ ಮಾರ್ಗ ಸಿನಿಮಾ ಉಚಿತ ಪ್ರದರ್ಶನ

» **ಹೊಸದುರ್ಗ**

ಪಟ್ಟಣದ ಜಯದೇವ ಸಮುದಾಯ ಭವನದಲ್ಲಿ ಜ.7 ರಂದು ಭಾನುವಾರ ಬೆಳಿಗ್ಗೆ 10.30 ಗಂಟೆಯಿಂದ ಕನಕ ಮಾರ್ಗ ಸಿನಿಮಾವನ್ನು 3 ಷೋಗಳಲ್ಲಿ ಉಚಿತವಾಗಿ ಪ್ರದರ್ಶಿಸಲಾಗುವುದು ಎಂದು ಈ ಸಿನಿಮಾದ ಚಿತ್ರಕಥೆ-ನಿರ್ದೇಶಕ ಹಾಗೂ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ವಿಶಾಲ್ ರಾಜ್ ತಿಳಿಸಿದರು.ಪಟ್ಟಣದ ಪ್ರವಾಸಿ ಮಂದಿರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಹೊರಪೇಟೆ ಮಲ್ಲೇಶಪ್ಪ ಅವರ ಕನಕನ ಹೆಜ್ಜೆ ಕಾದಂಬರಿ ಆಧರಿಸಿ ಕನಕ ಮಾರ್ಗ ಸಿನಿಮಾ ರಚಿಸಲಾಗಿದೆ. ಕೆಂಪೇಗೌಡ ಪಾಟೀಲ್ ನಿರ್ಮಾಪಕರಾಗಿದ್ದಾರೆ. ದಾಸಶ್ರೇಷ್ಠ ಕನಕದಾಸರ ಜೀವನ, ಅವರು ನಡೆದ ದಾರಿ, ತತ್ವಾದರ್ಶ ಹಾಗೂ ಕೀರ್ತನೆಗಳನ್ನು ಈ ಸಿನಿಮಾ ಕೇಂದ್ರೀಕರಿಸಿದೆ. ವೇದಿಕ್ ಮೈಸೂರು ಹೀರೋ ಆಗಿ, 10ರಿಂದ 12 ವರ್ಷದ 15ಕ್ಕೂ ಹೆಚ್ಚು ಮಕ್ಕಳು ಹಾಗೂ ಕಾಗಿನೆಲೆ ಶ್ರೀ ನಿರಂಜನಾನಂದಪುರಿ ಸ್ವಾಮೀಜಿ ಅವರು ಅಭಿನಯಿಸಿದ್ದಾರೆ. ಇಂದಿನ ಕಮರ್ಷಿಯಲ್ ಭರಾಟೆಯಲ್ಲಿ ಈ ಸಿನಿಮಾವನ್ನು ಚಿತ್ರಮಂದಿರದಲ್ಲಿ ಪ್ರದರ್ಶಿಸುವ ಮೊದಲು ಶಾಲಾಕಾಲೇಜಿನ ವಿದ್ಯಾರ್ಥಿಗಳಿಗೆ ಉಚಿತವಾಗಿ ಪ್ರದರ್ಶಿಸುವ ಉದ್ದೇಶ ನಮ್ಮದಾಗಿದೆ ಎಂದು ತಿಳಿಸಿದರು. ಕನಕ ಮಾರ್ಗ ಸಿನಿಮಾ 2.24 ಗಂಟೆ ಪ್ರದರ್ಶನ ಆಗಲಿದೆ.

# ಕಾಂತರಾಜು ವರದಿ ಜಾರಿಗೆ ಸರ್ಕಾರಕ್ಕೆ ಒತ್ತಾಯ

» **ಚಿತ್ರದುರ್ಗ**

ಕಾಂತರಾಜು ವರದಿಯನ್ನು ರಾಜ್ಯ ಸರ್ಕಾರವು ಈ ಕೂಡಲೇ ಸ್ವೀಕರಿಸಿ ವರದಿಯನ್ನು ಯಥಾವತ್ತಾಗಿ ಅಂಗೀಕರಿಸಿ ಜಾರಿಗೊಳಿಸಬೇಕು. ಕೇಂದ್ರ ಸರ್ಕಾರವು ಜಾತಿವಾರು ಸಾಮಾಜಿಕ, ಶೈಕ್ಷಣಿಕ, ಆರ್ಥಿಕ ಸಮೀಕ್ಷೆ ಮಾಡಿಸಬೇಕು ಸೇರಿದಂತೆ ಇತರೆ ಹಕ್ಕೋತ್ತಾಯಗಳನ್ನು ಜ. 28 ರಂದು ಚಿತ್ರದುರ್ಗದಲ್ಲಿ ನಡೆಯಲಿರುವ ಶೋಷಿತರ ಜಾಗೃತಿ ಸಮಾವೇಶದಲ್ಲಿ ಸರ್ಕಾರಕ್ಕೆ ಒತ್ತಾಯಿಸಲಾಗುವುದೆಂದು ಕರ್ನಾಟಕ ಶೋಷಿತ ಸಮುದಾಯಗಳ ಮಹಾ ಒಕ್ಕೂಟದ ಅಧ್ಯಕ್ಷರಾದ ರಾಮಚಂದ್ರಪ್ಪ ತಿಳಿಸಿದರು.

ಚಿತ್ರದುರ್ಗ ನಗರದ ಪತ್ರಿಕಾ ಭವನದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದಅವರು,ಜನವರಿ-28ರಂದು ಚಿತ್ರದುರ್ಗ ನಗರದ ಶ್ರೀ ಮಾದಾರ ಚನ್ನಯ್ಯ ಗುರು ಪೀಠದ ಪಕ್ಕದ 150 ಎಕ್ಕರೆ ವಿಸ್ತೀರ್ಣ ಪ್ರದೇಶದಲ್ಲಿ ಶೋಷಿತರ ಜಾಗೃತಿ ಸಮಾವೇಶ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಈ ಸಮಾವೇಶಕ್ಕೆ ರಾಜ್ಯದ ಎಲ್ಲಾ ಶೋಷಿತ ಸಮುದಾಯಗಳ ಮುಖಂಡರನ್ನು ಆಹ್ವಾನಿಸಿದ್ದೇವೆ. ಈ ಸಮಾವೇಶದಲ್ಲಿ ಮುಖ್ಯಮಂತ್ರಿಗಳು ಭಾಗವಹಿಸುವುದಾಗಿ ತಿಳಿಸಿದ್ದಾರೆ. ಹಾಗೆಯೇ ಉಪಮುಖ್ಯಮಂತ್ರಿಗಳಾದ ಡಿ.ಕೆ ಶಿವಕುಮಾರರವರನ್ನು ಸಹ ಆಹ್ವಾನಿಸಿದ್ದೇವೆ..ರಾಜ್ಯದ ಎಲ್ಲಾ ಜಿಲ್ಲೆಗಳಿಂದ ಶೋಷಿತ ಸಮುದಾಯಗಳ



ಕಾರ್ಯಕರ್ತರು, ಮುಖಂಡರು ಭಾಗವಹಿಸಲಿದ್ದು ಸುಮಾರು 10 ಲಕ್ಷ ಜನ ಸೇರುವ ನಿರೀಕ್ಷೆಯಿದೆ ಎಂದರು.

ಭಾರತ ಹಲವು ವೈವಿದ್ಯತೆಯ ದೇಶ, ಸರ್ವಜನಾಂಗದ ಶಾಂತಿಯ ತೋಟ. ಆದರೆ ಬ್ರಾಹ್ಮಣ ಶಾಹಿಯ ಕುತಂತ್ರದಿಂದಾಗಿ ದೇಶದ ಸಂಪತ್ತು ಸಮಾನವಾಗಿ ಹಂಚಿಕೆಯಾಗದೆ ಶೇ.97%ರಷ್ಟು ತಳ ಸಮುದಾಯಗಳು ಸಾವಿರಾರು ವರ್ಷಗಳಿಂದ ಸಂಕಷ್ಟವನ್ನು ಅನುಭವಿಸಿದವು.

ಡಾ. ಬಾಬಾಸಾಹೇಬ್ ಅಂಬೇಡ್ಕರ್‌ರವರ ಸಂವಿದಾನದಿಂದ ಕಳೆದ 70 ವರ್ಷಗಳಿಂದ ವಿದ್ಯೆ, ಉದ್ಯೋಗ, ಅಧಿಕಾರ, ಅಂತಸ್ತು, ಸಮಾಗತೆಗಳನ್ನು ಪಡೆದು ದೇಶದ ಮೂಲ ನಿವಾಸಿಗಳು ಪ್ರಗತಿಯತ್ತ ಮುನ್ನಡೆಯುತ್ತಿದ್ದಾರೆ. ಇದನ್ನು ಸಹಿಸಲಾಗದ ಪುರೋಹಿತಶಾಹಿ ವರ್ಗ ಮುಸಲ್ಮಾನರೆಂಬ ಬೆದರು ಬೊಂಬೆಯ ಭಯ ಹುಟ್ಟಿಸಿ ತಮ್ಮ ಸ್ವಾರ್ಥಕ್ಕಾಗಿ ತಳ ಸಮುದಾಯದಯುವಕರುಗಳನ್ನುಮರಳು ಮಾಡುತ್ತಿವೆ. ಅವರ ಮಾತಿಗೆ ಮರಳಾಗದೆ ಸಂವಿಧಾನ, ಸಾಮಾಜಿಕ ನ್ಯಾಯ, ಸಹಬಾಳ್ವೆ, ಸ್ವಾಭಿಮಾನದ, ಸಂರಕ್ಷಣೆಗಾಗಿ ಐಕ್ಯತೆಯಿಂದ ಹೋರಾಡಬೇಕಿದೆ ಎಂದು ತಿಳಿಸಿದರು.ಅವಕಾಶ ವಂಚಿತ ಜಾತಿಗಳಿಗೆ ಮೀಸಲಾತಿ ನೀಡಿ ಸಾಮಾಜ ಸಮಾನತೆ ಸಾರಿದ ಕರ್ನಾಟಕ ಅಗ್ರಗಣ್ಯ ರಾಜ್ಯ ಹಲವು ಹಿಂದುಳಿದ ವರ್ಗಗಳ ಆಯೋಗಗಳು ವೈಜ್ಞಾನಿಕ ಅಧ್ಯಯನ ನಡೆಸಿ ಮೀಸಲಾತಿ ಜಾರಿಯಾಗಿದೆ. ಆದರೆ ಬಲಾಢ್ಯರು ಶೋಷಿತರ ಪಾಲನ್ನು ಕಬಳಿಸುತ್ತಿರುವುದು ಶೋಚನೀಯ. ಇಂದಿರಾಸಹಾನಿ ಕೇಸಿನಲ್ಲಿ ಸಂಕೋರ್ಟ್ ಹಿಂದುಳಿದ ವರ್ಗಗಳ ಶಾಶ್ವತ ಆಯೋಗವನ್ನು ರಚಿಸಿಕೊಳ್ಳುವಂತೆ ರಾಜ್ಯಗಳಿಗೆ ನಿರ್ದೇಶಿಸಿದೆ. ಆ ಪ್ರಕಾರ ಎಲ್ಲಾ ರಾಜ್ಯಗಳು ಆಯೋಗ ರಚಿಸಿ ಎಲ್ಲಾ ಜಾತಿಗಳ ಸಾಮಾಜಿಕ, ಶೈಕ್ಷಣಿಕ, ಆರ್ಥಿಕ ಹಿಂದುಳಿದಿರುವಿಕೆಯನ್ನು ಗುರುತಿಸಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಈ ಅಧ್ಯಯನಗಳನ್ನು ಪರಿಶೀಲಿಸಿ ಎಲ್ಲಾ ಜಾತಿಯವರಿಗೂ ಸಮಾನ ಅವಕಾಶಗಳನ್ನು ಕಲ್ಪಿಸಬೇಕು ಎಂಬುದು ಕರ್ನಾಟಕ ಶೋಷಿತ ಸಮುದಾಯಗಳ ಮಹಾ ಒಕ್ಕೂಟದ ಒತ್ತಾಯವಾಗಿದೆ.

ಈ ಸಮಾವೇಶದಲ್ಲಿ ಪ್ರಮುಖವಾದ ಹಕ್ಕೊತ್ತಾಯ ಮಾಡಲಿದ್ದು, ಕಾಂತರಾಜು ವರದಿಯನ್ನುರಾಜ್ಯಸರ್ಕಾರವುಈಕೂಡಲೇ ಸ್ವೀಕರಿಸಿ ವರದಿಯನ್ನು ಯಥಾವತ್ತಾಗಿ ಅಂಗೀಕರಿಸಿ ಜಾರಿಗೊಳಿಸಬೇಕು, ಕೇಂದ್ರ ಸರ್ಕಾರವು ಜಾತಿವಾರು ಸಾಮಾಜಿಕ, ಶೈಕ್ಷಣಿಕ, ಆರ್ಥಿಕ ಸಮೀಕ್ಷೆ ಮಾಡಿಸಬೇಕು ಇಘಖ ಶೇ.10 % ಮೀಸಲಾತಿಯನ್ನು ರದ್ದುಪಡಿಸಬೇಕು, ಮಹಿಳಾ ರಾಜಕೀಯ ಮೀಸಲಾತಿ ಕಾಯ್ದೆಯನ್ನು ಕೂಡಲೇ ಜಾರಿ ಮಾಡಬೇಕು. ರಾಜಕೀಯ ಕ್ಷೇತ್ರದಲ್ಲೂ ಒಳ ಮೀಸಲಾತಿ ಕಲ್ಪಿಸಬೇಕು.. ರಾಜಕೀಯ ಮೀಸಲಾತಿಯನ್ನು ಲೋಕಸಭೆ ಮತ್ತು ವಿಧಾನಸಭೆಗಳಲ್ಲಿ ಹಿಂದುಳಿದ ಜಾತಿಗಳಿಗೆ ಮತ್ತು ಅಲ್ಪಸಂಖ್ಯಾತರಿಗೆ ಅವಕಾಶ ಕಲ್ಪಿಸಬೇಕು.ಜನಸಂಖ್ಯೆಗೆ ಅನುಗುಣವಾಗಿ ಶೇಕಡವಾರು ಪ್ರಮಾಣದಲ್ಲಿ ಮೀಸಲಾತಿ ಹೆಚ್ಚಿಸಬೇಕು ಖಾಸಗಿ ಕ್ಷೇತ್ರಕ್ಕೂ ಮೀಸಲಾತಿಯನ್ನು ವಿಸ್ತರಿಸಬೇಕು ಎಂದು ಸರ್ಕಾರವನ್ನು ಆಗ್ರಹಿಸಲಾಗುವುದೆಂದು ತಿಳಿಸಿದರು. ವೆಂಕಟರಾಮಯ್ಯ, ಸುಬ್ರಮಣ್ಯ, ವೆಂಕಟಸುಬ್ಬರಾವ್, ಬಿಟಿ ಜಗದೀಶ್, ನಿರಂಜನ ಮೂರ್ತಿ, ಖಾಸಿಂ ಆಲಿ, ಶ್ರೀರಾಮ್, ರಾಮಜ್ಜ, ಎನ್.ಡಿ.ಕುಮಾರ್, ಶ್ರೀಮತಿ ಶಶಿಕಲಾ ಸುರೇಶ್ ಬಾಬು, ಮೂರ್ತಿ, ಪ್ರತಾಪ್ ಜೋಗಿ, ಲಕ್ಷ್ಮಿಕಾಂತ, ಷಫಿವುಲ್ಲಾ, ರಾಜಣ್ಣ, ಮಂಜುನಾಥ್ ದುರುಗೇಶಪ್ಪ, ಸಿಟಿ.ಕೃಷ್ಣಮೂರ್ತಿ, ಪ್ರಕಾಶಮೂರ್ತಿ ಸೇರಿದಂತೆ ಇತರರು ಭಾಗವಹಿಸಿದ್ದರು.

### ಸರ್ಕಾರದ ವಿರುದ್ಧ ವಿಧಾನ ಪರಿಷತ್ ಸದಸ್ಯ ಕೆ.ಎಸ್.ನವೀನ್ ವಾಗ್ದಾಳಿ

# ಅಭಿವೃದ್ಧಿ ಮರೆತ ಕಾಂಗ್ರೆಸ್ ಸರ್ಕಾರ


» **ಚಿತ್ರದುರ್ಗ**

ರಾಜ್ಯ ಸರ್ಕಾರ ಹಿಂದೂಗಳು ಮತ್ತು ಹಿಂದೂ ಕಾರ್ಯಕರ್ತರ ಮೇಲೆ ಸುಖಾ ಸುಮ್ಮನೆ ಹಳೆಯ ಪ್ರಕರಣ ದಾಖಲು ಮಾಡಿ ಹಿಂದೂಗಳನ್ನು ಕೆಣಕುತ್ತಿದೆ. ಅಭಿವೃದ್ಧಿ ಬದಲು ಈ ರೀತಿ ಕೆಲಸ ಮಾಡುತ್ತಿರುವ ಸರ್ಕಾರ ಇದರ ಪರಿಣಾಮವನ್ನು ಮುಂದೆ ಎದುರಿಸಬೇಕಾಗುತ್ತದೆ ಎಂದು ವಿಧಾನ ಪರಿಷತ್ ಸದಸ್ಯ ಕೆ.ಎಸ್.ನವೀನ್ ಎಚ್ಚರಿಸಿದರು.

ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬರುತ್ತಿದ್ದಂತಯೇ ಹಿಂದುಗಳ ಮೇಲೆ ದಬ್ಬಾಳಿಕೆ ನಡೆಸುವ ಕಾರ್ಯ ಮಾಡುತ್ತಿದೆ. 25-30 ವರ್ಷ ಹಳೆಯದಾದ ಪ್ರಕರಣಗಳನ್ನು ಹೂರ ತೆಗೆದು ಅದರಲ್ಲಿ ಭಾಗಿಯಾಗಿದ್ದವರ ಮೇಲೆ ಪ್ರಕರಣವನ್ನು ದಾಖಲಿಸಿ ಜೈಲಿಗೆ ಕಳುಹಿಸುವ ಕಾರ್ಯವನ್ನು ಮಾಡುತ್ತಿದೆ, ಇದನ್ನು ಬಿಜೆಪಿ ಖಂಡಿಸುತ್ತದೆ ಎಂದು ಆಕ್ರೋಶ ವ್ಯಕಪಡಿಸಿದರು.

ಕಳೆದ ವಾರದ ಹಿಂದೆ ರಾಜ್ಯದ ಪೋಲೀಸ್ ಮುಖ್ಯಸ್ಥರ ಸಭೆಯನ್ನು ನಡೆಸಿದ ಸಿದ್ದರಾಮಯ್ಯ ಮತ್ತು ಡಿ.ಕೆ.ಶಿವಕುಮಾರ್ ರಾಜ್ಯದ ಹಿಂದುಗಳ ಮೇಲೆ ದಬ್ಬಾಳಿಕೆಯನ್ನು ನಡೆಸಿ ಅವರನ್ನು ಜೈಲಿಗೆ ಕಳುಹಿಸುವಂತೆ ಪೋಲಿಸರಿಗೆ ಸೂಚನೆಯನ್ನು ನೀಡಿದ್ದಾರೆ ಎನ್ನಲಾಗಿದೆ ಇದರಿಂದ ಪೊಲೀಸ್‌ನವರು ಈ ರೀತಿಯಾದ ಕೆಲಸವನ್ನು ಮಾಡುತ್ತಿದ್ದಾರೆ ಎನ್ನಲಾಗಿದೆ ಎಂದು ತಿಳಿಸಿದರು.

ರಾಜ್ಯದಲ್ಲಿ ಬರಗಾಲ ಬಂದಿದೆ ರೈತರು ನೀರಿಲ್ಲದೆ, ಜಾನುವಾರುಗಳಿಗೆ ಮೇವಿಲ್ಲದೆ, ಜನತೆ ಕೆಲಸ ಇಲ್ಲದೆ ಗುಳೆ ಹೋಗುತ್ತಿದ್ದಾರೆ ಇದನ್ನು ತಡೆಯುವ ಕಾರ್ಯವನ್ನು ಮಾಡದ ಸಿದ್ದರಾಮಯ್ಯ ಹಿಂದುಗಳ ಮೇಲೆ ದೌರ್ಜನ್ಯವನ್ನು ನಡೆಸುತ್ತಿದ್ದಾರೆ. ಸರ್ಕಾರ ಅಧಿಕಾರಕ್ಕೆ ಬಂದು 7 ತಿಂಗಳಾದರು ಸಹಾ ಯಾವ ಅಭಿವೃದ್ಧಿ ಕಾರ್ಯವೂ ಸಹ



ಪ್ರಾರಂಭವಾಗಿಲ್ಲ. ಈ ಹಿಂದೆ ಆಗಿರುವ ಅಭಿವೃದ್ಧಿ ಕಾರ್ಯವೂ ಸಹಾ ನಡೆಯದೆ ಸ್ಥಗಿತವಾಗಿವೆ. ಸರ್ಕಾರ ತಟಸ್ಥವಾಗಿದೆ, ತಮ್ಮ ಗ್ಯಾರಂಟಿಗಳಿಗೆ ಹಣವನ್ನು ಹೊಂದಿಸುವ ಕಾರ್ಯವನ್ನು ಮಾಡುತ್ತಿದೆ, ಪರಿಶಿಷ್ಟ ಜಾತಿ ಮತ್ತು ಪಂಗಡದವರ ಹಣವನ್ನು ಸಹಾ ತೆಗೆದು ಕೊಳ್ಳಲಾಗುತ್ತಿದೆ. ಅವರ ಅಭಿವೃದ್ಧಿಯನ್ನು ಸಹಾ ಕಡೆಗಣಿಸಲಾಗುತ್ತಿದೆ ಎಂದು ದೂರಿದರು.

ಸಿದ್ದರಾಮಯ್ಯ ತಮ್ಮ ಪಕ್ಷದ ಹೈಕಮಾಂಡ್ ಓಲೈಸುವುದಕ್ಕಾಗಿ ರಾಜ್ಯದಲ್ಲಿ ಹಿಂದುಗಳ ಮೇಲೆ ಪ್ರಕರಣವನ್ನು ದಾಖಲಿಸುತ್ತಿದ್ದಾರೆ. ಜಾತಿಗಳ ಮಧ್ಯೆ ಕಲಹವನ್ನು ಉಂಟು ಮಾಡುವಂತ ಕಾರ್ಯವನ್ನು ಮಾಡುತ್ತಿದ್ದಾರೆ. ಕಾಂಗ್ರೆಸ್ ಮುಖಂಡರಾದ ಹರಿಪ್ರಸಾದ್, ಉಗ್ರಪ್ಪ, ಆಂಜನೇಯ ರವರು ಹಿಂದೂ ಸಮಾಜವನ್ನು ಕೆಣಕುವ ಮಾತುಗಳನ್ನು ಆಡುತ್ತಿದ್ದಾರೆ. ರಾಜ್ಯದಲ್ಲಿ ಆಶಾಂತಿಯನ್ನು ಉಂಟು ಮಾಡುವಂತ ಕಾರ್ಯವನ್ನು ಮಾಡುತ್ತಿದ್ದಾರೆ. ಸರ್ಕಾರ ರಾಜ್ಯದಲ್ಲಿ ಆಶಾಂತಿಯನ್ನುಂಟು ಮಾಡುವಂತೆ ಪೋಲೀಸರಿಗೆ ಸೂಚನೆಯನ್ನು ನೀಡಿದಂತೆ ಕಾಣುತ್ತಿದೆ. ಇದರಿಂದ ಅವರು ಈ ರೀತಿಯಾದ ಕೆಲಸವನ್ನು ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

ರಾಜ್ಯದಲ್ಲಿ ಹಿಂದೂಗಳನ್ನು ಧಮನ ಮಾಡುವ ಕಾರ್ಯವನ್ನು ಸಿದ್ದರಾಮಯ್ಯ ಮಾಡುತ್ತಿದ್ದರೆ ಅದರ ಹತ್ತು ಪಟ್ಟು ಹೆಚ್ಚು ಹಿಂದುಗಳ ಶಕ್ತಿ ಜಾಸ್ತಿಯಾಗುತ್ತದೆ. ಆಂಜನೇಯ ರಾವಣನ ಲಂಕೆಯನ್ನು ದಹನ ಮಾಡಿದಂತೆ ನಮ್ಮ ಕಾರ್ಯಕರ್ತರು ಸಿದ್ದರಾಮಯ್ಯ ಸರ್ಕಾರವನ್ನು ಧಮನ ಮಾಡಲು ಮುಂದಾಗುತ್ತಾರೆ ಎಂದು ಎಚ್ಚರಿಕೆ ನೀಡಿದರು.

ಹಿಂದು ಕಾರ್ಯಕರ್ತರನ್ನು ಬಂಧಿಸುವ ಕಾರ್ಯವನ್ನು ನಿಲ್ಲಿಸಿ ರಾಜ್ಯದ ಬರಗಾಲ, ಅಭಿವೃದ್ಧಿಯ ಕಡೆಗೆ ಯೋಚಿಸಿ ಹಿಂದುಗಳಲ್ಲಿ ಭಯದ ವಾತಾವರಣವನ್ನು ನಿರ್ಮಾಣ ಮಾಡಬೇಡಿ ಎಂದು ಕಿವಿ ಮಾತು ಹೇಳಿದರು.

ಪಕ್ಷದಲ್ಲಿ ಪ್ರಮಾಣಿಕತೆ ಪಕ್ಷ ನೀಡಿದ ಸೂಚನೆಗಳನ್ನು ಸರಿಯಾದ ರೀತಿಯಲ್ಲಿ ಮಾಡಿಕೊಂಡು ಹೋದರೆ ಮುಂದೆ ಪಕ್ಷ ಅವರನ್ನು ಗುರುತಿಸಿ ಉತ್ತಮ ಸ್ಥಾನವನ್ನು ನೀಡುತ್ತದೆ ಎಂಬುದಕ್ಕೆ ನನಗೆ ಈಗ ಬಂದಿರುವ ಸ್ಥಾನವೇ ಸಾಕ್ಷಿ. ಪಕ್ಷ ಈ ಹಿಂದೆ ನೀಡಿದ ವಿವಿಧ ರೀತಿಯ ಹುದ್ದೆಗಳನ್ನು ನಿಭಾಯಿಸಿದ್ದರಿಂದ ಈಗ ನನಗೆ ರಾಜ್ಯ ವಕ್ತಾರ ಹುದ್ದೆಯನ್ನು ನೀಡಿದೆ. ಇದಕ್ಕೆ ಪಕ್ಷದ ಮುಖಂಡರನ್ನು ಅಭಿನಂದಿಸಿದರು.

### ಚಿತ್ರದುರ್ಗದಲ್ಲಿ ನಡೆಯುವ ಕಾರ್ಯಕ್ರಮಕ್ಕೆ ಸಮಾಜ ಬಾಂಧವರು ಭಾಗಿಯಾಗಲು ಕರೆ

### ಇಂದು ಕಾಯಕ ಜನೋತ್ಸವ-2024 ಕಾರ್ಯಕ್ರಮಕ್ಕೆ ಭಾಗವಹಿಸಲು ಮನವಿ

» **ಹೊಸದುರ್ಗ**

ಚಿತ್ರ ದುರ್ಗದ ಶ್ರೀ ಮಾಚಿದೇವ ಮಹಾಸಂಸ್ಥಾನ ಮಠದ



ಶಂಕುಸ್ಥಾಪನೆ 15 ನೇ ವರ್ಷದ ವಾರ್ಷಿಕೋತ್ಸವ, ಮಹಾಸ್ವಾಮೀಜಿಗಳ ಜಂಗಮ ದೀಕ್ಷೆಯ 25 ನೇ ಹಾಗೂ 40 ನೇಜನ್ಮದಿನದವಾರ್ಷಿಕೋತ್ಸವ ಮತ್ತು ಜಗದ್ಗುರು ಡಾ: ಶ್ರೀ ಬಸವ ಮಾಚಿದೇವ ಮಹಾಸ್ವಾಮೀಜಿಯವರ 6 ನೇ ಪಟ್ಟಾಧಿಕಾರ ಮಹೋತ್ಸವದ ಅಂಗವಾಗಿ ಚಿತ್ರದುರ್ಗದ ಮಾಚಿದೇವ ಮಹಾಸಂಸ್ಥಾನ



ಮಠದ ಆವರಣದಲ್ಲಿ ಸಾಂಕೇತಿಕವಾಗಿ ಜ.6 ರಂದು ಶನಿವಾರ ನಡೆಯಲಿರುವ ಕಾಯಕ ಜನೋತ್ಸವ-2024 ರ ಕಾರ್ಯಕ್ರಮಕ್ಕೆ ಸಮಸ್ತ ಮಡಿವಾಳ ಸಮಾಜ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ರಾಜ್ಯ ಶ್ರೀ ವೀರ ಮಡಿವಾಳ ಮಾಚಿದೇವ ಯುವ ಸೇನಾ ಪಡೆಯ ಅಧ್ಯಕ್ಷ ನಾಗತಿಹಳ್ಳಿಮಂಜುನಾಥ್ ಸಮಾಜ ಬಾಂಧವರಲ್ಲಿ ಮನವಿ ಮಾಡಿದ್ದಾರೆ.ಪಟ್ಟಣದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯನ್ನುದ್ದೇಶಿ ಮಾತನಾಡಿದ ಅವರು ಚಿತ್ರದುರ್ಗ ಮಡಿವಾಳ ಮಹಾಮಠದ ಜಗದ್ಗುರು ಡಾ:ಶ್ರೀ ಬಸವ ಮಾಚಿದೇವ ಸ್ವಾಮೀಜಿಯವರ ಸಾನಿಧ್ಯದಲ್ಲಿ ಕಾರ್ಯಕ್ರಮ ನಡೆಯಲಿದ್ದು ಜ.6 ರಂದು ಶನಿವಾರ ಬೆಳಿಗ್ಗೆ 9 ಗಂಟೆಗೆ ಶ್ರೀಮಠದ ಆವರಣದಲ್ಲಿ ನಡೆಯಲಿರುವ ಕಾರ್ಯಕ್ರಮದಲ್ಲಿ ಬೆಳಿಗ್ಗೆ 9 ಗಂಟೆಗೆ ಶ್ರೀ ಮಾಚಿದೇವ ಆಧ್ಯಾತ್ಮಿಕ ಮಂದಿರದಲ್ಲಿ ಮಾಚಿದೇವರ ಪ್ರಜಾ ಕೈಂಕರ್ಯಗಳು,ಸಾಮೂಹಿಕ ವಚನ ಪ್ರಾರ್ಥನೆ ನಂತರ ವಚನ ಗ್ರಂಥಗಳ ಪಲ್ಲಕ್ಕಿ ಉತ್ಸವ ಹಾಗೂ ಮೆರವಣಿಗೆ ಬೆಳಿಗ್ಗೆ 11 ಗಂಟೆಗೆ ವಿಶ್ವಕ್ಕೆ ಮಾಚಿದೇವರ ಕೊಡುಗೆಗಳು ಕುರಿತಂತೆ ಉಪನ್ಯಾಸ ನಡೆಯಲಿದೆ ಎಂದು ತಿಳಿಸಿರು ಅವರು ರಾಜ್ಯದಲ್ಲಿ ಬರಗಾಲ ಮತ್ತು ಶ್ರೀ ಮಠದ ಆವರಣದಲ್ಲಿ ಮೂಲಭೂತ ಸೌಕರ್ಯಗಳ ಕಾಮಗಾರಿಗಳು ನಡೆಯುತ್ತಿರುವುದರಿಂದ ಈ ಬಾರಿ 2024 ರ ಕಾಯಕ ಜನೋತ್ಸವವನ್ನು ಸಾಂಕೇತಿಕವಾಗಿ ಆಚರಿಸಲಾಗುತ್ತಿದೆ ಎಂದರು.

**ಪ್ರಮುಖ ಸುದ್ದಿ**

# ನಿವೃತ್ತ ನೌಕರರ ದಿನಾಚರಣೆ, ನೂತನ ಕ್ಯಾಲೆಂಡರ್ ಬಿಡುಗಡೆ

» **ಚಿತ್ರದುರ್ಗ**

ನಿವೃತ್ತಿ ಜೀವನ ಸುಖಮಯವಾಗಿರ ಬೇಕಾದರೆ ದುಶ್ಚಟದಿಂದ ದೂರವಿದ್ದು, ಆರೋಗ್ಯಕರ ಅಭ್ಯಾಸಗಳನ್ನು ರೂಢಿಸಿಕೊಳ್ಳಬೇಕೆಂದು ನಿವೃತ್ತ ನ್ಯಾಯಾಧೀಶರಾದ ಹೆಚ್.ಬಿಲ್ಲಪ್ಪ ನಿವೃತ್ತ ನೌಕರರಿಗೆ ಸಲಹೆ ನೀಡಿದರು.

ಕರ್ನಾಟಕ ರಾಜ್ಯ ಸರ್ಕಾರಿ ನಿವೃತ್ತ ನೌಕರರ ಸಂಘ ಜಿಲ್ಲಾ ಶಾಖೆ ವತಿಯಿಂದ ತ.ರಾ.ಸು.ರಂಗಮಂದಿರದಲ್ಲಿ ಶುಕ್ರವಾರ ನಡೆದ ನಿವೃತ್ತ ನೌಕರರ ದಿನಾಚರಣೆ ಹಾಗೂ ನೂತನ ವರ್ಷದ ಕ್ಯಾಲೆಂಡರ್ ಬಿಡುಗಡೆ ಸಮಾರಂಭ ಉದ್ಘಾಟಿಸಿ ಮಾತನಾಡಿದರು.

ಹದಿಮೂರು ವರ್ಷಗಳ ಕಾಲ ನಾನು ನ್ಯಾಯಾಧೀಶನಾಗಿದ್ದೆ. ಆಗ ಸಮಾಜದಲ್ಲಿ ಯಾರೊಂದಿಗೂ ಬೆರೆಯುವ ಅವಕಾಶವಿರುತ್ತಿರಲಿಲ್ಲ. ನಿವೃತ್ತಿಯ ನಂತರ ಎಲ್ಲರೊಂದಿಗೆ ಬೆರೆತು ಖುಷಿಯಿಂದ ಇದ್ದೇನೆ. ಅನೇಕ ಪ್ರೇಕ್ಷಣೀಯ ಸ್ಥಳಗಳನ್ನು ನೋಡುವ ಅವಕಾಶ ನಿವೃತ್ತಿಯ ನಂತರ ದೊರಕುತ್ತದೆ ಎಂದರು.

ಸರ್ಕಾರಿ ನೌಕರಿಯಿಂದ ನಿವೃತ್ತಿಯಾದೆ ಎಂದು ಯಾರು



ಬೇಜಾರು ಪಟ್ಟುಕೊಳ್ಳಬಾರದು. ಸರ್ಕಾರಿ ನೌಕರಿಯಲ್ಲಿದ್ದಾಗ ಸೀಮಿತವಾದ ಎಲ್ಲೆಯಿರುತ್ತದೆ. ಅದೆ ನಿವೃತ್ತಿಯಾದ ನಂತರ ಆರಾಮಾಗಿ ಎಲ್ಲಾ ಕಡೆ ಸುತ್ತಾಡಿಕೊಂಡು ನೆಮ್ಮದಿಯಾಗಿರಬಹುದು. ನಿವೃತ್ತಿ ಜೀವನ ವೃತ್ತಿ ಜೀವನಕ್ಕಿಂತ ಅತ್ಯಂತ ವಿಶಾಲವಾದುದು. ವಯಸ್ಸು ಸಾಮಾನ್ಯವಾಗಿ ಎಲ್ಲರನ್ನು ಕಾಡುತ್ತದೆ. ಅದಕ್ಕಾಗಿ ಉತ್ತಮ ಹವ್ಯಾಸಗಳನ್ನು ಮೈಗೂಡಿಸಿಕೊಂಡರೆ ಯಾವುದೇ ರೋಗ ರುಜಿನಗಳಿಲ್ಲದೆ ಆರೋಗ್ಯವಾಗಿರಬಹುದು. ಏನನ್ನು ಖರ್ಚು ಮಾಡದೆ ಅಪಾರವಾದ ಸಂತೋಷ ಪಡುವ ಅವಕಾಶಗಳಿವೆ. ಜೀವನ ಎನ್ನುವುದು ಸುಲಭವಲ್ಲ. ಕಷ್ಟ. ಹಾಗಂತ ಎದೆಗುಂದುವುದು ಬೇಡ. ಪುಸ್ತಕಗಳ ಅಧ್ಯಯನದಿಂದ ಜೀವನಕ್ಕೆ ಉಪಯುಕ್ತವಾದ ವಿಚಾರಗಳು ಸಿಗುತ್ತವೆ ಎಂದು ನಿವೃತ್ತ ಸರ್ಕಾರಿ ನೌಕರರಿಗೆ ತಿಳಿಸಿದರು.

ನಿವೃತ್ತಿಯ ನಂತರ ಆಶಾವಾದದಿಂದ ಮುಂದೆ ಸಾಗಿ. ಹಾಸಿಗೆಯಿದ್ದಷ್ಟು ಕಾಲು ಚಾಚಬೇಕು. ಸಾಲ ಮಾಡಿಕೊಂಡು ಕಷ್ಟಪಡಬೇಡಿ. ಹಣಕಾಸಿನ ಹಿಡಿತ ನಿಮ್ಮ ಕೈಯಲ್ಲಿರಲಿ. ಊಟ ತಿಂಡಿಯಿಂದ ವಂಚಿತರಾಗಬೇಡಿ. ನಿಮಗೆ ನೀವು ನಷ್ಟ ಮಾಡಿಕೊಳ್ಳದಂತೆಎಚ್ಚರಿಕೆಯಿಂದಿರುವುದು ಒಳ್ಳೆಯದು ಎಂದು ಕಿವಿಮಾತು ಹೇಳಿದರು.

ನಿವೃತ್ತ ನೌಕರರ ಸಂಘದ ಜಿಲ್ಲಾಧ್ಯಕ್ಷ ಆರ್.ರಂಗಪ್ಪರೆಡ್ಡಿ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡುತ್ತ ತ್ಯಾಗ ಮತ್ತು ಸೇವೆಯ ತಳಹದಿಯ ಮೇಲೆ ನಿವೃತ್ತ ನೌಕರರ ಸಂಘವನ್ನು ಕಟ್ಟಲಾಗಿದೆ. ಡಿ.17, 1982 ರಲ್ಲಿ ಸುಪ್ರೀಂಕೋರ್ಟ್ ಮಹತ್ತರ ತೀರ್ಪು ನೀಡಿದ್ದರಿಂದ ಅಂದಿನಿಂದ ನಿವೃತ್ತ ನೌಕರರ ದಿನಾಚರಣೆಯನ್ನು ಪ್ರತಿ ವರ್ಷವೂ ಆಚರಿಸಿಕೊಂಡು ಬರುತ್ತಿದ್ದೇವೆ. ಚಿತ್ರದುರ್ಗದಲ್ಲಿ ಸುಸಜ್ಜಿತವಾದ ನಿವೃತ್ತ ನೌಕರರ ಭವನ ನಿರ್ಮಾಣವಾಗಿದೆ. ಅಲ್ಲಿ ಒಂದೆಡೆನಿವೃತ್ತನೌಕರರೆಲ್ಲಾಸೇರಿಸಮಸ್ಯೆಗಳ ಕುರಿತು ಚರ್ಚಿಸುವುದಲ್ಲದೆ ಅನೇಕ ಮನೋರಂಜನಾ ಕಾರ್ಯಕ್ರಮಗಳನ್ನು ಆಚರಿಸಿಕೊಳ್ಳುತ್ತೇವೆಂದು ನುಡಿದರು.

ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಕಲ್ಯಾಣಾಧಿಕಾರಿ ಶ್ರೀಮತಿ ಎ.ಎಂ.ವೀಣಾ ನೂತನ ವರ್ಷದ ಕ್ಯಾಲೆಂಡರ್ ಬಿಡುಗಡೆಗೊಳಿಸಿದರು.

ನಿವೃತ್ತ ನೌಕರರ ಸಂಘದ ಜಿಲ್ಲಾ ಗೌರವಾಧ್ಯಕ್ಷ ವೈ.ಚಂದ್ರಶೇಖರಯ್ಯ, ಕಾರ್ಯಾಧ್ಯಕ್ಷ ಎಂ.ಶಿವಾನಂದಪ್ಪ, ಸಲಹಾ ಮಂಡಳಿ ಅಧ್ಯಕ್ಷ ಬಿ.ಬಡಮಲ್ಲಪ್ಪ, ಸಾಂಸ್ಕೃತಿಕ ಹಾಗೂ ಮನೋರಂಜನಾ ಕೇಂದ್ರದ ಅಧ್ಯಕ್ಷ ಕೆ.ವಾಸುದೇವರೆಡ್ಡಿ, ಬುದ್ಧ ನ್ಯಾಷನಲ್ ಫೆಲೋಶಿಪ್ ಪ್ರಶಸ್ತಿ ಪುರಸ್ಕೃತ ಪಿ.ನಾಗರಾಜ್, ಶ್ರೀಮತಿ ಹೆಚ್.ಬಿಲ್ಲಪ್ಪ ಹಾಗೂ ಸಂಘದ ಪದಾಧಿಕಾರಿಗಳು ವೇದಿಕೆಯಲ್ಲಿದ್ದರು.

## ಫಾಸ್ಟ್ ನ್ಯೂಸ್

### ಹರಿದಾಸ ಹಬ್ಬ 2024

**ಚಿತ್ರದುರ್ಗ:** ಶ್ರೀ ಹರಿವಾಯುಗುರು ಸೇವಾ ಟ್ರಸ್ಟ್‌ವತಿಯಿಂದ ಶ್ರೀ ಕನಕಪುರಂದರಾದಿ ಹರಿದಾಸರುಗಳ ಸ್ಮರಣೆಯ ಹರಿದಾಸ ಹಬ್ಬ 2024 ಜ. 20 ರಿಂದ 27ರವರೆಗೆ ನಗರದ ವಾಸವಿ ಶಾಲಾ ಆವರಣದಲ್ಲಿ ನಡೆಯಲಿದೆ ಎಂದು ಟ್ರಸ್ಟ್‌ನ ಅಧ್ಯಕ್ಷರಾದ ಟಿ.ಕೆ.ನಾಗರಾಜ ರಾವ್ ತಿಳಿಸಿದ್ದಾರೆ. ಈ ಹರಿದಾಸ ಹಬ್ಬದಲ್ಲಿ ಪಾರಾಯಣ, ಭಜನೆ, ಉಪನ್ಯಾಸ, ಪವನ–ಹೋಮ ಶ್ರೀರಾಮಡೋಲೋತ್ಸವ ಆರ್ಶೀವಚನ ದಾಸಲಹರಿ ಶ್ರೀ ರಾಮನ ಸ್ತುತಿ, ಸ್ತೂತ್ರ, ಪ್ರವಚನ, ಭವ್ಯ ಶೋಬಾಯಾತ್ರೆ, ಶ್ರೀರಾಮತಾರಕ ಹೋಮ ಕಾರ್ಯಕ್ರಮಗಳು ನಡೆಯಲಿದೆ. ಈ ಕಾರ್ಯಕ್ರಮದ ಸಾನಿಧ್ಯವನ್ನು ಭೀಮನಕಟ್ಟೆಯ ಶ್ರೀ ಭೀಮಸೇತು ಮುನಿವೃಂದ ಮಠದ ಶ್ರೀ ರಘುವರೇಂದ್ರತೀರ್ಥ ಶ್ರೀಗಳು ವಹಿಸಲಿದ್ದಾರೆ.ಜ. 20ರ ಸಂಜೆ 6.30ಕ್ಕೆಮ ವಾಸವಿ ಶಾಲಾ ಆವರಣದಲ್ಲಿ ಹರಿದಾಸ ಹಬ್ಬದ ಉದ್ಘಾಟನೆ ನಡೆಯಲಿದ್ದು, ಬೆಂಗಳೂರಿನ ಶ್ರೀ ಪೂರ್ಣಪ್ರಜ್ಞ ವಿದ್ಯಾ ಪೀಠದ ಅಧ್ಯಾಪಕರಾದ ಕೃಷ್ಣರಾಜ ಕುತ್ಪಾಡಿ ಉಪನ್ಯಾಸವನ್ನು ನೀಡಲಿದ್ದಾರೆ. ಬ್ರಾಹ್ಮಣ ಸಂಘದ ಅಧ್ಯಕ್ಷರಾದ ಪಿ.ಎಸ.ಮಂಜುನಾಥ್, ಶ್ರೀರಾಘವೇಂದ್ರಸ್ವಾಮಿ ಮಠದ ವ್ಯವಸ್ಥಾಪಕರಾದ ಪ್ರಾಣೇಶಾಚಾರ್ಯ, ಉತ್ತರಾಧಿಮಠದ ವ್ಯವಸ್ಥಾಪಕರಾದ ಉಪಾಧ್ಯ ಪ್ರಭಂಜನಾಚಾರ್ಯ ಕೂಸಸೂರು, ನಗರಸಭೆ ಸದಸ್ಯರಾದ ಹರೀಶ್, ಬಡಗನಾಡು ಬ್ರಾಹ್ಮಣ ಸಂಘದ ಅಧ್ಯಕ್ಷರಾದ ಶೇಷಗಿರಿರಾವ್, ಗುರುರಾಜ ಸೇವಾ ಸಂಘದ ಅಧ್ಯಕ್ಷರಾದ ವೇದವ್ಯಾಸಚಾರ್ಯ, ವೃಷ್ಣವಸಭಾದ ಅಧ್ಯಕ್ಷರಾದ ಜಗದೀಶ್ ಸೇರಿದಂತೆ ಇತರರು ಭಾಗವಹಿಸಲಿದ್ದಾರೆ. ಪ್ರತಿ ದಿನ ಶ್ರೀ ರಾಘವೇಂದ್ರಸ್ವಾಮಿಗಳ ಮಠದಲ್ಲಿ ಬೆಳಿಗ್ಗೆ 8 ರಿಂದ ಮಹಾಭಾರತ ತಾತ್ಪರ್ಯ ನಿರ್ಣಯಗಳ ಬಗ್ಗೆ ಪಾಠ–ಪ್ರವಚನ 9 ರಿಂದ ಶ್ರೀಗಳು ಗೃಹ ಭೇಟಿ ಪಾದ ಪೂಜಾ ಕಾರ್ಯಕ್ರಮ, 10.30ರಿಂದ ಸಂಸ್ಥಾನ ಪೂಜೆ ನಡೆಯಲಿದೆ. ಇದರೊಂದಿಗೆ ಪ್ರತಿ ದಿನ ಸಂಜೆ ವಾಸವಿ ಶಾಲೆಯ ಆವರಣದಲ್ಲಿ ಸಂಜೆ 6 ರಿಂದ ಸಾಮೂಹಿಕ ವಿಷ್ಣು ಸಹಸ್ರನಾಮ ಸ್ತೋತ್ರ ಪಾರಾಯಣ, 6.30ರಿಂದ ಶ್ರೀ ರಾಮನಾಮ ಭಜನೆ ಸಂಕೀರ್ತನೆ 7 ರಿಂದ ಅಯೋಧ ರಾಮನ ಬಗ್ಗೆ ಉಪನ್ಯಾಸ ನಡೆಯಲಿದ್ದು, 8 ರಿಂದ ಶ್ರೀಪಾದಂಗಳವರ ಅನುಗ್ರಹ ಅಮೃತವಾಣಿ ನಡೆಯಲಿದೆ.ಜ.21ರಂದು ಶ್ರೀ ಪರಂದರದಾಸರ ಕೃತಿಗಳ ಬಗ್ಗೆ ಶ್ರೀ ಬ್ರಹ್ಮ ಚೈತನ್ಯ ಭಜನಾ ಮಂಡಳಿಯವರಿಂದ, ಜ. 22ರಿಂದು ಶ್ರೀ ಕನಕದಾಸರ ಕೃತಿಗಳ ಬಗ್ಗೆ ಶ್ರೀವಾರಿ ಭಜನಾ ಮಂಡಳಿಯವರಿಂದ, ಜ. 23 ರಂದು ಶ್ರೀ ವಿಜಯ ದಾಸರ ಕೃತಿಗಳ ಬಗ್ಗೆ, ಶ್ರೀ ಸರಸ್ವತಿ ಭಜನಾ ಮಂಡಳಿಯವರಿಂದ, ಜ. 24 ರಂದು ಶ್ರೀ ಗೋಪಾಲದಾಸರ ಕೃತಿಗಳ ಬಗ್ಗೆ ಶ್ರೀ ಸಪ್ತಗಿರಿ ಭಜನಾ ಮಂಡಳಿಯವರಿಂದ ಜ. 25 ರಂದು ಶ್ರೀ ಜಗನ್ನಾಥ ದಾಸರ ಕೃತಿಗಳ ಬಗ್ಗೆ ಶ್ರೀ ಪಾಂಡುರಂಗ ಭಜನಾ ಮಂಡಳಿಯವರಿಂದ ಶ್ರೀ ರಾಮ ಸಂಕೀರ್ತನೆ ನಡೆಯಲಿದೆ.ಜ. 26 ರಂದು ನಗರದ ಗಾಯತ್ರಿ ಕಲ್ಯಾಣ ಮಂಟಪದಲ್ಲಿ ಲೋಕ ಕಲ್ಯಾಣಕ್ಕಾಗಿ ಶ್ರೀ ರಾಮ ತಾರಕ ಹೋಮ ನಡೆಯಲಿದೆ. ಬೆಳಿಗ್ಗೆ 5.30ಕ್ಕೆ ಪುಣ್ಯಾಹ, ಕಳಶ ಸ್ಥಾಪನೆ, ಹೋಮ 9.15ಕ್ಕೆ ಪೂರ್ಣಾಹುತಿ ಕಾರ್ಯಕ್ರಮವೂ ಕೆ.ನರಹರಿ ಆಚಾರ್ಯ ಹಾಗೂ ರಾಘವಾಚಾರ್ಯ ಮಿಟ್ಟಿಯವರಿಂದ ನಡೆಯಲಿದ್ದು 9.30ಕ್ಕೆ ಚಳ್ಳಕೆರೆ, ಹಿರಿಯೂರು, ಹೂಸದುರ್ಗ ಭಜನಾ ಮಂಡಳಿಯವರಿಂದ ಭಜನಾ ಕಾರ್ಯಕ್ರಮ ನಡೆಯಲಿದೆ. ಸಂಜೆ 5.30ರಿಂದ ಅಯೋಧ್ಯಾರಾಮನ ಭವ್ಯ ಶೋಭಾಯಾತ್ರೆ ನಡೆಯಲಿದ್ದು, ಪುಷ್ಪಾಲಂಕೃತ ರಜತ ರಥದಲ್ಲಿ ಶ್ರೀ ರಾಮಚಂದ್ರದೇವರ ವಿಗ್ರಹದೊಂದಿಗೆ ದಾಸವರೇಣ್ಯರ ಭಾವಚಿತ್ರ ಹಾಗೂ ಶ್ರೀಪಾದಂಗಳವರು ಭಾಗವಹಿಸಲಿದ್ದಾರೆ. ಯಾತೆಯೂ ಆನೆ ಬಾಗಿಲ ಬಳಿಯ ಶ್ರೀ ಸುವೃಷ್ಟಿ ಪ್ರಾಣದೇವರ ಸನ್ನಿಧಾನದಿಂದ ಪ್ರಾರಂಭವಾಗಿ ವಾಸವಿ ವಿದ್ಯಾ ಸಂಸ್ಥೆಯನ್ನು ತಲುಪಲಿದೆ. ಶೋಭಾಯಾತ್ರೆಯನ್ನು ಶಾಸಕರಾದ ಕೆ.ಸಿ.ವಿರೇಂದ್ರ ಹಾಗೂ ಬ್ರಾಹ್ಮಣ ಸಂಘದ ಅಧ್ಯಕ್ಷರಾದ ಪಿ.ಎಸ್.ಮಂಜುನಾಥ್ ಉದ್ಘಾಟಿಸಲಿದ್ದಾರೆ. ಸಂಜೆ 6.30ರಿಂದ ಸಾಧನಾ ಸನ್ಮಾನ ಪ್ರವಚನ ಮಂಗಳ ಮಹೋತ್ಸವ ಸಂಜೆ 7 ಕ್ಕೆ ಶ್ರೀರಾಮ ಡೊಲೋತ್ಸವ ನಡೆಯಲಿದೆ.ಜ. 27 ರ ಶನಿವಾರ ಬೆಳ್ಳಿಗೆ ಶ್ರೀ ರಾಘವೇಂದ್ರಸ್ವಾಮಿಗಳ ಮಠದಲ್ಲಿ ಶ್ರೀ ವಾಯುಸ್ತುತಿ ಪುನಃಶ್ಚರಣ ಹೋಮ, ಬೆಳಿಗ್ಗೆ 5.30ಕ್ಕೆ ಪುಣ್ಯಾಹ, ಕಳಶ ಸ್ಥಾಪನೆ, ಹೋಮ 9.15ಕ್ಕೆ ಪೂರ್ಣಾಹುತಿ ಕಾರ್ಯಕ್ರಮ ನಡೆಯಲಿದೆ. ಸಂಜೆ 6 ಕ್ಕೆ ವಾಸವಿವಿದ್ಯಾಸಂಸ್ಥೆಯ ಆವರಣದಲ್ಲಿ ಶ್ರೀರಾಮ ಸಂಕೀರ್ತನ ಶ್ರೀ ಬೃಂದಾವನ ಭಜನಾ ಮಂಡಲಿಯವರಿಂದ ಸಂಜೆ 6.30ಕ್ಕೆ 2024ರ ಹರಿದಾಸ ಹಬ್ಬದ ಸಮಾರೋಪ ಸಮಾರಂಭ ನಡೆಯಲಿದ್ದು, ಮಾಜಿ ಶಾಸಕರಾದ ಜಿ.ಎಚ್. ತಿಪ್ಪಾರೆಡ್ಡಿ, ನ್ಯಾಯಾವಾದಿಗಳು, ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾದ ಅಧ್ಯಕ್ಷರಾದ ಆಶೋಕ ಹಾರನಹಳ್ಳಿ ಆಗಮಿಸಲಿದ್ದಾರೆ. ಸಂಜೆ 7.30ರಿಂದ ಮನೋಜವಂ ಆತ್ರೇಯ ಮತ್ತು ಸಂಗಡಿಗರಿಂದ ದಾಸ ಲಹರಿ ಕಾರ್ಯಕ್ರಮ ನಡೆಯಲಿದೆ.

### 46ನೇ ರಾಷ್ಟ್ರೀಯ ಹ್ಯಾಂಡ್‌ಬಾಲ್

**ಚಿತ್ರದುರ್ಗ:** ಜನವರಿ 9 ರಿಂದ ಜನವರಿ 13ರವರೆಗೆ ರಾಜಸ್ಥಾನದ ಕರೋಲಿಯಲ್ಲಿ ನಡೆಯುವ 20 ವರ್ಷದೊಳಗಿನ ಬಾಲಕರ ವಿಭಾಗದ 46ನೇ ರಾಷ್ಟ್ರೀಯ ಹ್ಯಾಂಡ್‌ಬಾಲ್‌ನಲ್ಲಿ ಭಾಗವಹಿಸುತ್ತಿರುವ ಚಿತ್ರದುರ್ಗದ ಜಿಲ್ಲಾ ಹ್ಯಾಂಡ್‌ಬಾಲ್ ಸಂಸ್ಥೆಯ ಕ್ರೀಡಾಪಟುಗಳಿಗೆ ಜ.6ರ ಬೆಳಿಗ್ಗೆ 10ಗಂಟೆಗೆ ವಿ.ಪಿ.ಬಡಾವಣೆಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಬೀಳ್ಕೊಡುಗೆ ಸಮಾರಂಭವನ್ನು ಹಮ್ಮಿಕೊಳ್ಳಲಾಗಿದೆ.

ಜಾಗೃತಿ ಕಾರ್ಯಾಗಾರದಲ್ಲಿ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷೆ ಹೆಚ್.ಎನ್.ಮೀನಾ ಹೇಳಿಕೆ

# ಗ್ರಾಹಕರಿಗೆ ಪರಿಹಾರ ನೀಡದವರ ವಿರುದ್ಧ ಕೇಸ್

» **ಚಿತ್ರದುರ್ಗ**

ಗ್ರಾಹಕರ ಆಯೋಗ ನೀಡಿದ ಆದೇಶದಂತೆ ಸೇವಾದಾರರು ಗ್ರಾಹಕರಿಗೆ ಪರಿಹಾರ ನೀಡದೇ ಇದ್ದರೆ, ಅಂತಹವರ ವಿರುದ್ಧ ಕ್ರಿಮಿನಲ್ ಕೇಸ್ ದಾಖಲಿಸಲಾಗುವುದು ಎಂದು ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷೆ ಹೆಚ್. ಎನ್. ಮೀನಾ ಹೇಳಿದರು.



ಚಿತ್ರದುರ್ಗ ತಾಲ್ಲೂಕಿನ ಬಳ್ಳೇಕಟ್ಟೆಯ ಕುಂಬಾರ ಗುಂಡಯ್ಯ ಮಹಾಸಂಸ್ಥಾನದಲ್ಲಿ ಶುಕ್ರವಾರ ಆಹಾರ ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆ, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ, ಕಾನೂನು ಮಾಪನಾಶಾಸ್ತ್ರ ಇಲಾಖೆ, ಜಿಲ್ಲಾ ಗ್ರಾಹಕರ ಮಾಹಿತಿ ಕೇಂದ್ರ, ಕರ್ನಾಟಕ ಕುಂಬಾರ ಮಹಿಳಾ ಮಹಾಸಭಾದ ವತಿಯಿಂದ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಸ್ತ್ರೀ–ಶಕ್ತಿ, ಸ್ವ-ಸಹಾಯ ಸಂಘದ ಸದಸ್ಯರುಗಳಿಗೆ ಗ್ರಾಹಕರ ಸಮಸ್ಯೆ ಮತ್ತು ಹಕ್ಕುಗಳ ಜಾಗೃತಿ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು. ಗ್ರಾಹಕರ ಆಯೋಗ ನೀಡಿದ ಆದೇಶವನ್ನು ಸೇವಾದಾರರು ಪಾಲಿಸಬೇಕಾಗುತ್ತದೆ. ಪರಿಹಾರ ನೀಡಲು ವಿಫಲವಾದರೆ ಕ್ರಿಮಿನಲ್ ಕೇಸು ದಾಖಲಿಸುವುದರೊಂದಿಗೆ ಜೈಲು ಶಿಕ್ಷೆಗೆ ಗುರಿಯಾಗಬೇಕಾಗುತ್ತದೆ ಎಂದರು.1962 ರಲ್ಲಿ ಅಮೇರಿಕಾದ ಅಧ್ಯಕ್ಷ ಜಾನ್ ಎಫ್ ಕೆನಡಿ ಅವರು ಗ್ರಾಹಕರ ಹಿತರಕ್ಷಣಾ ಕಾಯ್ದೆಯನ್ನು ಅಮೇರಿಕಾದಲ್ಲಿ ಮೊದಲ ಬಾರಿಗೆ ಜಾರಿಗೆ ತಂದರು. ಭಾರತದಲ್ಲಿ ಮಾಜಿ ಪ್ರಧಾನಿ ರಾಜೀವ್ ಗಾಂಧಿ ಅವರ ಸರ್ಕಾರ 1986ರಲ್ಲಿ ಗ್ರಾಹಕರ ಹಿತರಕ್ಷಣಾ ಕಾಯ್ದೆಯನ್ನು ಜಾರಿಗೆ ತಂದಿತು. ಇದರ ಮುಖ್ಯ ಉದ್ದೇಶ ಗ್ರಾಹಕರನ್ನು ವಂಚನೆ ಹಾಗೂ ಶೋಷಣೆಯಿಂದ ತಪ್ಪಿಸುವುದಾಗಿದೆ.

ಗ್ರಾಹಕರು ರೂ.50 ಲಕ್ಷದ ವರೆಗಿನ ವಂಚನೆ ಹಾಗೂ ಸೇವಾ ನ್ಯೂನ್ಯತೆ ಪ್ರಕರಣಗಳಿಗೆ ಜಿಲ್ಲಾ ಗ್ರಾಹಕರ ಆಯೋಗ, ರೂ.50 ಲಕ್ಷದಿಂದ ರೂ.2 ಕೋಟಿವರೆಗೆ ರಾಜ್ಯ ಗ್ರಾಹಕರ ಆಯೋಗ ಹಾಗೂ ರೂ.2 ಕೋಟಿಯಿಂದ 10 ಕೋಟಿ ವರೆಗೆ ರಾಷ್ಟ್ರೀಯಗ್ರಾಹಕರಆಯೋಗದಲ್ಲಿಪ್ರಕರಣ ದಾಖಲಿಸಿ ನ್ಯಾಯ ಪಡೆದುಕೊಳ್ಳಬಹುದು. ಪ್ರಕರಣದ ದಾಖಲಿಸಿ 3 ತಿಂಗಳ ಒಳಗಾಗಿ ಆಯೋಗ ಪ್ರಕರಣವನ್ನು ಇತ್ಯರ್ಥ ಪಡಿಸಲಾಗುವುದು ಎಂದರು. ಗ್ರಾಹಕರು ಸ್ವತಃ ಅಥವಾ ವಕೀಲರ ಮೂಲಕ ನೇರವಾಗಿ ಆಯೋಗದಲ್ಲಿ ಪ್ರಕರಣ ದಾಖಲಿಸಬಹುದು.ಇಲ್ಲವಾದರೆಆನ್‌ಲೈನ್ ಮೂಲಕವು ಪ್ರಕರಣ ದಾಖಲಿಸಬಹುದು. ಗ್ರಾಹಕರ ಹಿತರಕ್ಷಣಾ ಕಾಯ್ದೆಗೆ ಕಾಲ ಕಾಲಕ್ಕೆ ತಿದ್ದುಪಡಿ ತಂದು ಕಾಯ್ದೆಯನ್ನು ಬಲ ಪಡಿಸಲಾಗಿದೆ. ಗ್ರಾಹಕರು ಬ್ಯಾಂಕ್, ವಿಮೆ, ಆರೋಗ್ಯ, ಸಾರಿಗೆ ಸೇರಿದಂತೆ ಎಲ್ಲಾ ರೀತಿಯ ಸೇವೆಗಳಲ್ಲಿ ನ್ಯೂನತೆಗಳಿಗೆ ಸಂಬಂಧಿಸಿದಂತೆ ಆಯೋಗದಲ್ಲಿ ಪ್ರಕರಣ ದಾಖಲಿಸಬಹುದು ಎಂದು ಅಧ್ಯಕ್ಷೆ ಹೆಚ್.ಎನ್. ಮೀನಾ ಹೇಳಿದರು. ಕಾರ್ಯಕ್ರಮದಲ್ಲಿ ತೆಲಸಂಗ ಕುಂಬಾರ ಗುಂಡಯ್ಯ ಮಹಾಸಂಸ್ಥಾನದ ಬಸವ ಕುಂಬಾರ ಗುಂಡಯ್ಯ ಸ್ವಾಮಿಗಳು, ಚಿತ್ರದುರ್ಗ ಕುಂಬಾರ ಗುಂಡಯ್ಯ ಮಹಾಸಂಸ್ಥಾನದ ಬಸವಮೂರ್ತಿ ಕುಂಬಾರ ಸ್ವಾಮಿಗಳು ಸಾನಿಧ್ಯ ವಹಿಸಿದ್ದರು. ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ ಸದಸ್ಯೆ ಬಿ.ಹೆಚ್.ಯಶೋಧ, ಆಹಾರ ನಿರೀಕ್ಷಕಿ ಉಮಾದೇವಿ, ಕರ್ನಾಟಕ ಕುಂಬಾರ ಮಹಿಳಾ ಮಹಾಸಭಾ ಅಧ್ಯಕ್ಷೆ ಎಸ್. ಬೈಲಮ್ಮ, ಜಿಲ್ಲಾ ಗ್ರಾಹಕರ ಮಾಹಿತಿ ಕೇಂದ್ರ ಜಿಲ್ಲಾ ಸಂಯೋಜಕ ತಮಟಕಲ್ಲು ಬಿ. ಹನುಮಂತಪ್ಪ, ಕುಂಬಾರ ಗಂಡಯ್ಯ ಮಹಾಸಂಸ್ಥಾನದ ಮಾಜಿ ಕಾರ್ಯದರ್ಶಿ ಮೃತ್ಯುಂಜಯ ಇದ್ದರು.

# ವೀರಭದ್ರಸ್ವಾಮಿ, ಆಂಜನೇಯಸ್ವಾಮಿ ಕಡೆ ಕಾರ್ತಿಕೋತ್ಸ ಹಾಗೂ ತೆಪ್ಪೋತ್ಸವ

» **ಪರಶುರಾಂಪುರ**

ಶ್ರೀ ವೀರಭದ್ರಸ್ವಾಮಿ ಮತ್ತುಶ್ರೀ ಆಂಜನೇಯಸ್ವಾಮಿ ಕಡೆ ಕಾರ್ತಿಕೋತ್ಸ ಅಂಗವಾಗಿ ವೇದಾವತಿ ನದಿಗೆ ನೂತನವಾಗಿ ನಿರ್ಮಿಸಿದ ಚೌಳೂರು ಬ್ಯಾರೇಜ್‌ನಲ್ಲಿ ಶುಕ್ರವಾರ ಶ್ರದ್ಧಾ ಭಕ್ತಿ ಹಾಗೂ ಸಂಭ್ರಮದ ಮಧ್ಯೆ ಸಾವಿರಾರು ಭಕ್ತರ ಸಮ್ಮುಖದಲ್ಲಿ ತೆಪ್ಪೋತ್ಸವ ವಿಜೃಂಭಣೆಯಿಂದ ಅದ್ದೂರಿಯಾಗಿ ನೆರವೇರಿತು .




ಗ್ರಾಮದಲ್ಲಿ ವಿಶೇಷ ಪೂಜೆಯೊಂದಿಗೆ ಪಲ್ಲಕ್ಕಿಯಲ್ಲಿ ಶ್ರೀ ವೀರಭದ್ರಸ್ವಾಮಿ ಮತ್ತು ಆಂಜನೇಯ ಸ್ವಾಮಿಯ ಉತ್ಸವ ಮೂರ್ತಿಗಳನ್ನ ಗ್ರಾಮದ ಪ್ರಮುಖ ಬೀದಿಯಲ್ಲಿ ಡೋಳ್ಳು ಕುಣಿತ , ಡ್ರಂಸೆಟ್ , ಕೋಲಾಟ , ನಂದಿಧ್ವಜ , ಸೋಮನ ಕುಣಿತ ಜತೆಗೆ ಹಲವು ಜನಪದ ಕಲಾ ತಂಡ ಮತ್ತು ವಾದ್ಯಗಳೊಂದಿಗೆ ಮೆರವಣಿಗೆ ಮೂಲಕ ಸಮೀಪದ ವೇದಾವತಿ ನದಿಯ ದಡಕ್ಕೆ ತಂದು ಪೂಜೆ ಸಲ್ಲಿಸಿದರು .

ಬಳಿಕ ತಳಿರು ತೋರಣ , ಹೂಗಳಿಂದ ಅಲಂಕರಿಸಿದ ಸುಂದರ ತೆಪ್ಪದಲ್ಲಿ ಶ್ರೀ ವೀರಭದ್ರ ಮತ್ತು ಆಂಜನೇಯ ಸ್ವಾಮಿಯ ಉತ್ಸವ ಮೂರ್ತಿಯನ್ನ ಪ್ರತಿಷ್ಠಾಪಿಸಿ ಮಂತ್ರಘೋಷಗಳ ನಡುವೆ ವಿವಿಧ ಧಾರ್ಮಿಕ ವಿಧಿವಿಧಾನಗಳೊಂದಿಗೆ ಪೂಜೆ ಸಲ್ಲಿಸಿದ ನಂತರ ತೆಪ್ಪೋತ್ಸವ ಚಾಲನೆ ವೇಳೆಯಲ್ಲಿ ಶಾಸಕ ಟಿ.ರಘುಮೂರ್ತಿ , ಗ್ರಾಮದ ಹಿರಿಯರು , ಮುಖಂಡರು ಇದ್ದರು .



ಬಯಲು ಸೀಮೆಯ ಗಡಿಭಾಗದಲ್ಲಿ ನಡೆದ ತೆಪ್ಪೋತ್ಸವ .ಗಡಿಭಾಗದಲ್ಲಿ ರೈತರ ಅನುಕೂಲಕ್ಕಾಗಿ ಕುಡಿಯುವ ನೀರಿಗಾಗಿ ನಿರ್ಮಿಸಿದ ಬ್ಯಾರಾಜ್‌ನಲ್ಲಿ ಚೌಳೂರು ಗ್ರಾಮಸ್ಥರು ಕಡೇ ಕಾರ್ತಿಕೋತ್ಸವದ ಅಂಗವಾಗಿ ಗ್ರಾಮದ ಆರಾಧ್ಯ ದೇವರುಗಳನ್ನ ತೆಪ್ಪದಲ್ಲಿ ಮೆರವಣಿಗೆ ಮಾಡಿ ಹರಕೆ ತೀರಿಸಲಾಯಿತು . ಈ ಕ್ಷಣಕ್ಕೆ ಸಾವಿರಾರು ಜನರು ದೇವರಿಗೆ ಜಯಘೋಷಗಳ ಮೂಲಕ ಚಪ್ಪಾಳೆ ,ಶಿಳ್ಳೆ ಕೇಕೆ ಹಾಕುವುದರ ಮುಖಾಂತರ ತೆಪ್ಪೋತ್ಸವನ್ನ ಸಾವಿರಾರು ಭಕ್ತರು ಕಣ್ತುಂಬಿಕೊಂಡರು . ಉತ್ಸವದ ಅಂಗವಾಗಿ ಸಾವಿರಾರು ಜನರು ಭಕ್ತರು ಆಗಮಿಸುವ ಹಿನ್ನೆಲೆಯಲ್ಲಿ ಪೊಲೀಸ್ ಇಲಾಖೆ , ಅಗ್ನಿಶಾಮಕ ದಳ ಮತ್ತು ದೇವಸ್ಥಾನ ಕಮಿಟಿಯವರು ,ಸ್ಥಳೀಯ ಗ್ರಾಪಂ ಮುಂಜಾಗ್ರತೆಯನ್ನ ವಹಿಸಿದ್ದರು.

ಸ್ವಾಮಿಯ ಭವ್ಯ ಪಲ್ಲಕ್ಕಿ ಹಾಗೂ ತೆಪ್ಪೋತ್ಸವ ಕಣ್ಣು ್ತಂಬಿಕೊಂಡು ಇಷ್ಟಾರ್ಥ ಹರಕೆ ತೀರಿಸಲು ಅಪಾರ ಸಂಖ್ಯೆಯಲ್ಲಿ ಭಕ್ತರು ಆಗಮಿಸಿದ್ದರು .

ಉಪ್ಪಾರಹಟ್ಟಿಯಲ್ಲಿ ರುದ್ರಭೂಮಿ ಸಮಸ್ಯೆ

# ಪೊಲೀಸ್ ಭದ್ರತೆಯಲ್ಲಿ ಕಲ್ಲಪ್ಪ ಅಂತ್ಯಸಂಸ್ಕಾರ



» **ಹಿರಿಯೂರು**

ತಾಲ್ಲೂಕಿನ ವಾಣಿವಿಲಾಸಪುರ ರಸ್ತೆಯಲ್ಲಿರುವ ಉಪ್ಪಾರಹಟ್ಟಿ ಗ್ರಾಮದಲ್ಲಿ ರುದ್ರಭೂಮಿ ಇಲ್ಲದ ಕಾರಣ ಮೃತ ವ್ಯಕ್ತಿಯೊಬ್ಬರ ಅಂತ್ಯಸಂಸ್ಕಾರವನ್ನು ಮಾರಿಕಣಿವೆ ರಸ್ತೆ ಬಳಿ ಮಾಡಲು ಸ್ಥಳೀಯರು ಅಡ್ಡಿಪಡಿಸಿದರು. ಇದರಿಂದ ಪೊಲೀಸ್ ಭದ್ರತೆಯಲ್ಲಿ ಬುಧವಾರ ಸಂಜೆ ವ್ಯಕ್ತಿಯ ಅಂತ್ಯಸಂಸ್ಕಾರ ನಡೆಸಲಾಯಿತು.ಉಪ್ಪಾರಹಟ್ಟಿಯಲ್ಲಿ ಮಂಗಳವಾರ ರಾತ್ರಿ ಕಲ್ಲಪ್ಪ ಅವರು ಮೃತಪಟ್ಟಿದ್ದರು. ಗ್ರಾಮದಲ್ಲಿ ರುದ್ರಭೂಮಿ ಇಲ್ಲದ ಕಾರಣಕ್ಕೆ ಅವರ ಅಂತ್ಯಕ್ರಿಯೆ ರಸ್ತೆ ಬದಿಯಲ್ಲಿ ನಡೆಸಲು ಸ್ಥಳೀಯರು ಅವಕಾಶಕೊಟ್ಟಿರಲಿಲ್ಲ, ಸ್ಥಳೀಯರು ಹಾಗೂ ಸಂಬಂಧಿಕರು ಆಕ್ರೋಶಗೊಂಡು ಜಿಲ್ಲಾಧಿಕಾರಿ ಮಧ್ಯ ಪ್ರವೇಶಿಸಿ ರುದ್ರಭೂಮಿ ಸಮಸ್ಯೆ ಪರಿಹರಿಸಬೇಕು ಎಂದು ಪಟ್ಟು ಹಿಡಿದರು. ಗ್ರಾಮಕ್ಕೆ ಭೇಟಿ ನೀಡಿದ್ದ ತಹಶೀಲ್ದಾರ್ ರಾಜೇಶ್ ಕುಮಾರ್ ಮೃತರ ಸಂಬಂಧಿಕರ ಮನ ಒಲಿಸಲು ಪ್ರಯತ್ನಿಸಿದರೂ ಪ್ರಯೋಜನವಾಗಲಿಲ್ಲ. ಅಂತಿಮವಾಗಿ ಪೊಲೀಸ್ ಭದ್ರತೆಯಲ್ಲಿ ಮೊದಲು ಅಂತ್ಯಸಂಸ್ಕಾರ ಮಾಡುತ್ತಿದ್ದ ಜಾಗದಲ್ಲಿಯೇ ಅಂತ್ಯಕ್ರಿಯೆ ಮಾಡಿಸಿ, ವಾರದೊಳಗೆ ರುದ್ರಭೂಮಿ ಸಮಸ್ಯೆ ಬಗೆಹರಿಸುವ ಭರವಸೆ ನೀಡಿದರು.ಉಪ್ಪಾರಹಟ್ಟಿ ಗ್ರಾಮದಲ್ಲಿ ಉಪ್ಪಾರ ಸಮುದಾಯಕ್ಕೆ ಸೇರಿದ ನೂರು ಮನೆಗಳಿದ್ದು, ಸುಮಾರು 600ಕ್ಕೂ ಹೆಚ್ಚು ಜನರಿದ್ದಾರೆ. ಹಟ್ಟಿಯಲ್ಲಿರುವ ಯಾರಿಗೂ ಒಂದಿಂಚು ಭೂಮಿ ಇಲ್ಲ. ಕೂಲಿಯೇ ಎಲ್ಲರಿಗೂ ಬದುಕಿನ ಆಧಾರ. ಹಟ್ಟಿಯಲ್ಲಿ ಯಾರಾದರೂ ಮರಣ ಹೊಂದಿದರೆ ಶವಸಂಸ್ಕಾರ ಮಾಡಲು ಜಾಗ ಕೇಳುವುದೇ ತಪ್ಪಾ ಎಂಬ ಪ್ರಶ್ನೆ ಗ್ರಾಮಸ್ಥರದ್ದಾಗಿದೆ. ಈಗಾಗಲೇ ಯರದಕಟ್ಟೆ ಗೋಮಾಳದ ಸರ್ವೆ ನಂ 19ರಲ್ಲಿ 1. 17 ಎಕರೆ ಜಮೀನನ್ನು ರುದ್ರಭೂಮಿಗೆ ಮಂಜೂರು ಮಾಡಿ ಪಹಣಿ ಬಂದಿದ್ದು. ಒಂದು ವರ್ಷ ಕಳೆದಿದೆ. ಅಲ್ಲಿಂದ ಇಲ್ಲಿಯವರೆಗೆ ಸುಮಾರು ಏಳೆಂಟು ಮಂದಿ ಮರಣ ಹೊಂದಿದ್ದಾರೆ. ಆದಾಗ್ಯೂ ರುದ್ರಭೂಮಿಯಲ್ಲಿ ಅಂತ್ಯಕ್ರಿಯೆ ನಡೆಸಲು ಅಲ್ಲಿನ ಸ್ಥಳೀಯರು ಬಿಡುತ್ತಿಲ್ಲ. ಆದ್ದರಿಂದ ವಿ.ವಿ.ಪುರ ರಸ್ತೆಯ ಪಕ್ಕದಲ್ಲಿಯೇ ಅಂತ್ಯಸಂಸ್ಕಾರ ಮಾಡುತ್ತಿದ್ದಾರೆ. ಉಪ್ಪಾರ ಜನಾಂಗದ ಮುಖಂಡ ನಾಗರಾಜ್ ಉಪ್ಪಾರ ಮಾತನಾಡಿ, ಉಪ್ಪಾರಹಟ್ಟಿ ಗ್ರಾಮಕ್ಕೆ ರುದ್ರಭೂಮಿ ನೀಡುವಲ್ಲಿ ತಾಲ್ಲೂಕು ಆಡಳಿತ ಸಂಪೂರ್ಣ ವಿಫಲವಾಗಿದೆ. ಜಿಲ್ಲಾಧಿಕಾರಿ ಮದ್ಯಪ್ರವೇಶ ಮಾಡಿ ಸಮಸ್ಯೆ ಇತ್ಯರ್ಥಪಡಿಸಬೇಕು.

## ಧರ್ಮಪುರ 8 ಕೆರೆಗೆ ನೀರುಹರಿಸುವ ಮೊದಲಹಂತದಯೋಜನೆ ಪೂರ್ಣಗೊಂಡಿದೆ

» **ಹಿರಿಯೂರು**

ತಾಲೂಕಿನ ಧರ್ಮಪುರ ಏತ ನೀರಾವರಿ ಯೋಜನೆ ಅಡಿ 8 ಕೆರೆಗಳಿಗೆ ನೀರು ಹರಿಸುವ ಮೊದಲಹಂತದಯೋಜನೆಪೂರ್ಣಗೊಂಡಿದ್ದು, ಪ್ರಾಯೋಗಿಕವಾಗಿ ಮೂರು ಕೆರೆಗಳಿಗೆ ನೀರು ತುಂಬಿಸುವ ಕಾರ್ಯ ಫಲಪ್ರದವಾಗಿರುವುದು ಹೋಬಳಿ ಅನ್ನದಾತರ ಮೊಗದಲ್ಲಿ ಮಂದಹಾಸ ಮೂಡಿಸಿದೆ. ತಾಲೂಕಿನ ಹೊಸಹಳ್ಳಿ ಸಮೀಪದ ವೇದಾವತಿ ನದಿ ಪಾತ್ರದಲ್ಲಿ ನಿರ್ಮಿಸಿರುವ ಪಂಪ್ ಹೌಸ್ ಬಳಿಯ ಜಾಕ್ವನ್ ನಿಂದ 19 ಕಿಲೋ ಮೀಟರ್ ದೂರ ಪೈಪ್ ಲೈನ್ ಅಳವಡಿಸಿ ಮೊದಲ ಹಂತದಲ್ಲಿ ಹಬ್ಬಿನಹೊಳೆ, ಗೂಳ್ಯ, ಈಶ್ವರಗೆರೆ, ಕೆರೆಗಳಿಗೆ ಟ್ರಯಲ್ ರನ್ ಮೂಲಕ ನೀರು ಹರಿಸಲಾಗುತ್ತದೆ.ಬಿಜೆಪಿ ಸರ್ಕಾರದ ಅವಧಿಯಲ್ಲಿ ಬಿಜೆಪಿ ಧರ್ಮಪುರ ಏತ ನೀರಾವರಿ ಯೋಜನೆಗೆ 90 ಕೋಟಿ ರೂ. ಮಂಜೂರಾಗಿತ್ತು. ಧರ್ಮಪುರ ಹೋಬಳಿಯ ಎಂಟು ಕೆರೆಗಳಿಗೆ ನೀರು ಹರಿಸುವ ಯೋಜನೆ ಇದಾಗಿದ್ದು, ಅಬ್ಬಿನಹೊಳೆ, ಈಶ್ವರಗೆರೆ, ಗೂಳ್ಯ, ಮುಂಗಸವಳ್ಳಿ, ಸೂಗೂರು, ಹರಿಯಬ್ಬೆ, ಅಜ್ಜಿಕಟ್ಟೆ, ಶ್ರವಣಗೆರೆ ಹಾಗೂ ಧರ್ಮಪುರ ಕೆರೆಗೆ ಪ್ರಸಕ್ತ ವರ್ಷ ನೀರು ಹರಿಯಲಿದೆ.ಮೊದಲ ಹಂತದ ಯೋಜನೆಗೆ 40 ಕೋಟಿ ರೂ ಮೀಸಲಿಟ್ಟಿದ್ದು, ಪಂಪ್ ಹೌಸ್, ಜಾಕ್ವೆಲ್, ಪವರ್ ಸ್ಟೇಷನ್, 950 ಎಚ್ಪಿ ಸಾಮರ್ಥ್ಯದ ಮೋಟರ್ ಪಂಪ್ ಅಳವಡಿಸಲಾಗಿದೆ. 2ನೇ ಹಂತದ ಯೋಜನೆಗೆ 50 ಕೋಟಿ ಅನುದಾನ ಬಿಡುಗಡೆಯಾಗಿದೆ.

## ಪ್ರಮುಖ ಸುದ್ದಿ

ಕ್ಷೇತ್ರಶಿಕ್ಷಣಾಧಿಕಾರಿ ಸಿ.ಎಂ.ತಿಪ್ಪೇಸ್ವಾಮಿ ಹೇಳಿಕೆ

# ಮಕ್ಕಳಲ್ಲಿ ರಾಷ್ಟ್ರೀಯ ಭಾವೈಕ್ಯತೆ ಮೂಡಿಸುವುದು ಅಗತ್ಯ

» **ಹಿರಿಯೂರು**

ರಾಷ್ಟ್ರನಿರ್ಮಾಣಮಾಡುವಲ್ಲಿರಾಷ್ಟ್ರೀಯ ಭಾವೈಕ್ಯತೆಯು ಅತ್ಯಗತ್ಯವಾಗಿದ್ದು, ಮಕ್ಕಳಿಗೆ ಶಿಸ್ತು, ದೇಶಾಭಿಮಾನ, ಸೇವಾ ಮನೋಭಾವನೆ ಮೂಡಿಸುವ ಜೊತೆಗೆ ಮಕ್ಕಳಲ್ಲಿ ರಾಷ್ಟ್ರೀಯ ಭಾವೈಕ್ಯತೆಯನ್ನು ಮೂಡಿಸಲು ಸೇವಾದಳ ಅಗತ್ಯವಾಗಿದೆ ಎಂಬುದಾಗಿ ಕ್ಷೇತ್ರಶಿಕ್ಷಣಾಧಿಕಾರಿಗಳಾದ ಸಿ.ಎಂ.ತಿಪ್ಪೇಸ್ವಾಮಿ ಹೇಳಿದರು.



ನಗರದ ಗುರುಭವನದಲ್ಲಿ ಭಾರತ ಸೇವಾದಳ ತಾಲ್ಲೂಕು ಸಮಿತಿ ಮತ್ತು ಕ್ಷೇತ್ರಶಿಕ್ಷಣಾಧಿಕಾರಿಗಳ ಕಾರ್ಯಾಲಯದ ವತಿಯಿಂದಸೇವಾದಳಶತಮಾನೋತ್ಸವದ ಅಂಗವಾಗಿ ಹಮ್ಮಿಕೊಳ್ಳಲಾಗಿದ್ದ "ಮಕ್ಕಳ ರಾಷ್ಟ್ರೀಯ ಭಾವೈಕ್ಯತಾ ಮೇಳ"ವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸೇವಾದಳದ ಮೂಲಕ ಮಕ್ಕಳಿಗೆ ದೈಹಿಕ ಶಿಕ್ಷಣ, ಯೋಗ ಶಿಕ್ಷಣ ಮತ್ತು ನೈತಿಕ ಶಿಕ್ಷಣವನ್ನು ಕಲಿಸುವ ಜೊತೆಗೆ ಮಕ್ಕಳಲ್ಲಿ ದೇಶಾಭಿಮಾನ, ಸೇವಾಮನೋಭಾವನೆ ಬೆಳೆಸುವ ಜೊತೆಗೆ ರಾಷ್ಟ್ರೀಯ ಭಾವೈಕ್ಯತೆಯನ್ನು ಉಂಟುಮಾಡಬಹುದಾಗಿದೆ ಎಂಬುದಾಗಿ ಅವರು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಭಾರತ ಸೇವಾದಳ ಅಧ್ಯಕ್ಷರಾದ ಎಂ.ಪಿ.ತಿಪ್ಪೇಸ್ವಾಮಿಯವರು ಮಾತನಾಡಿ, ಸೇವಾದಳಕ್ಕೆ ನೂರು ವರ್ಷ ತುಂಬಿದ ಅಂಗವಾಗಿ ಈ ಮಕ್ಕಳ ಮೇಳವನ್ನು ಆಯೋಜಿಸಲಾಗಿದ್ದು, ಶಾಲಾ ಮಕ್ಕಳು ಹಾಗೂ ಶಿಕ್ಷಕರು ಈ ಮೇಳದಲ್ಲಿ ಭಾಗವಹಿಸಿರುವುದು ಅತ್ಯಂತ ಸಂತಸದ ವಿಚಾರವಾಗಿದ್ದು, ಇದಕ್ಕೆ ಸಹಕಾರ ನೀಡಿದ ಶಿಕ್ಷಣ ಇಲಾಖೆಯ ಕಾರ್ಯ ಅಭಿನಂದನೀಯವಾಗಿದೆ ಎಂಬುದಾಗಿ ಹೇಳಿದರು.

ಈ ಕಾರ್ಯಕ್ರಮದಲ್ಲಿ ತಾಲೂಕು ದೈಹಿಕ ಶಿಕ್ಷಣಾಧಿಕಾರಿ ಮನೋಹರ್ ರವರು ಧ್ವಜಾರೋಹಣ ಮಾಡಿದರು. ಮಕ್ಕಳ ಜಾಥಾವನ್ನು ಸರ್ಕಾರಿ ನೌಕರರ ಸಂಘದ ಅಧ್ಯಕ್ಷರಾದ ಶಿವಕುಮಾರ್ ರವರು ಚಾಲನೆ ನೀಡಿದರು. ವಲಯ ಸಂಘಟಕರಾದ ಅಣ್ಣಯ್ಯನವರು ಭಾವೈಕ್ಯತೆ ಮತ್ತು ಶತಮಾನೋತ್ಸವ ಕುರಿತು ಪ್ರಾಸ್ತಾವಿಕವಾಗಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ತಾಲೂಕು ಕ್ಷೇತ್ರ ಸಮನ್ವಯ ಅಧಿಕಾರಿ ತಿಪ್ಪೇರುದ್ರಪ್ಪ, ಸೇವಾದಳ ಜಿಲ್ಲಾ ಉಪಾಧ್ಯಕ್ಷ ಮಲ್ಲಪ್ಪ, ಉಪಪ್ರಾಂಶುಪಾಲರಾದ ಮೋಕ್ಷನಾಥ, ಶಿಕ್ಷಕರ ಸಂಘದ ಜಿಲ್ಲಾ ಕಾರ್ಯದರ್ಶಿ ವೆಂಕಟೇಶ್, ಪ್ರೌಢಶಾಲಾ ಶಿಕ್ಷಕರ ಸಂಘದ ಅಧ್ಯಕ್ಷರಾದ ಅಶೋಕ್, ಹಿರಿಯ ಕಾರ್ಯಕರ್ತರಾದ ಯೋಗಾನಂದ ಮತ್ತು ಶಿವಣ್ಣ, ಶಾಲಾ ಸಂಘದ ಕಾರ್ಯದರ್ಶಿ ಯೋಗೇಶ್ ಕೊಂಡಪುರ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ನಾಗರಾಜ್ ಸೇರಿದಂತೆ ತಾಲೂಕಿನ ವಿವಿಧ ಶಾಲಾ ಮಕ್ಕಳು ಮತ್ತು ಶಿಕ್ಷಕರು ಭಾಗವಹಿಸಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T